ಸಂಪುಟ : 9 ಸಂಚಿಕೆ 209 ಪುಟ : 4 ಬೆಲೆ: 3.00 ಶುಕ್ರವಾರ ಸೆಪ್ಟೆಂಬರ್ 27 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್


# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 209 Pages : 4 Price : 3.00 Friday september 27 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ.ಪಾಟೀಲ ಅವರ ಸೆಪ್ಟೆಂಬರ್ 27 ಹಾಗೂ 28 ರ ಜಿಲ್ಲಾ ಪ್ರವಾಸ ಕಾರ್ಯಕ್ರಮ ಈ ಕೆಳಗಿನಂತಿದೆ.

ಸೆಪ್ಟೆಂಬರ್ 27 ರಂದು ಬೆಳಿಗ್ಗೆ 8 ಗಂಟೆಗೆ ಹುಬ್ಬಳ್ಳಿಯಿಂದ ರಸ್ತೆ ಮೂಲಕ ನರಗುಂದದ ತಾಲೂಕಿನ ಕೊಣ್ಣೂರು ಗ್ರಾಮಕ್ಕೆ ಆಗಮಿಸಿ ಬೆ 9 ಗಂಟೆಗೆ ಕೊಣ್ಣೂರು ಗ್ರಾಮದಲ್ಲಿರುವ ಪರಮೇಶ್ವರ ದೇವಾಲಯದ ಆವರಣದಲ್ಲಿರುವ ಶ್ರೀ ಪರಮೇಶ್ವರ ದೇವಾಲಯದ ಸಂರಕ್ಷಣಾ ಕಾಮಗಾರಿಯ ಭೂಮಿಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಂತರ ಕೊಣ್ಣೂರಿನಿಂದ ಗದುಗಿಗೆ ಆಗಮಿಸಿ ಬೆ 11 ಗಂಟೆಗೆ ಗದಗ ವೀರನಾರಾಯಣ ದೇವಾಲಯ ಆವರಣದಲ್ಲಿ ವಿಶ್ವ ಪ್ರವಾಸೋದ್ಯಮ ದಿನಾಚರಣೆ –2024 ಕಾರ್ಯಕ್ರಮದಲ್ಲಿ ಭಾಗವಹಿಸುವರು. ಬೆ 11.30 ಗಂಟೆಗೆ ನಗರದ ಎಸ್.ಎಂ.ಕೆ. ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಅಜೀಂ ಪ್ರೇಮಜಿ ಫೌಂಡೇಶನ್ ವತಿಯಿಂದ 1 ರಿಂದ 10ನೇ ತರಗತಿಯಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪೂರಕ ಪೌಷ್ಟಿಕ ಆಹಾರ, ಮೊಟ್ಟೆ , ಬಾಳೆ ಹಣ್ಣು , ಶೇಂಗಾ ಚೆಕ್ಕಿ ವಿತರಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡುವರು. ಮಧ್ಯಾಹ್ನ 12 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಳ್ಳುವರು.

ಸೆಪ್ಟೆಂಬರ್ 28 ರಂದು ಬೆ 9.30 ಗಂಟೆಗೆ ಗದಗ ತಾಲೂಕು ಹುಲಕೋಟಿ ಗ್ರಾಮದ ರೈತ ಸಂಪರ್ಕ ಕೇಂದ್ರದಲ್ಲಿ ಗೋದಾಮು ನಿರ್ಮಾಣ ಕಾಮಗಾರಿಯ ಭೂಮಿಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಬೆ 10.30 ಗಂಟೆಗೆ ನಗರದ ಕೆ.ಎಚ್.ಪಾಟೀಲ ಕ್ರೀಡಾಂಗಣದಲ್ಲಿ ಬೆಳಗಾವಿ ವಿಭಾಗ ಮಟ್ಟದ ಹಾಕಿ, ಫುಟ್ಬಾಲ್ ಮತ್ತು ಕಬಡ್ಡಿ ದಸರಾ ಕ್ರೀಡಾಕೂಟ–2024 ಕಾರ್ಯಕ್ರಮದಲ್ಲಿ ಭಾಗವಹಿಸುವರು. ಬೆ 11 ಗಂಟೆಗೆ ನಗರದ ಎಪಿಎಂಸಿ ಆವರಣದಲ್ಲಿ ಗದಗ ತಾಲೂಕು ಬೆಟಗೇರಿ ಶಹರದ ರೈತ ಸಂಪರ್ಕ ಕೇಂದ್ರದಲ್ಲಿ ಗೋದಾಮು ನಿರ್ಮಾಣ ಕಾಮಗಾರಿಯ ಭೂಮಿಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಬೆ 11.30 ಗಂಟೆಗೆ ಗದಗ ಕೆ.ವಿ.ಎಸ್.ಆರ್ ಕಾಲೇಜ್ ಹಿಂಭಾಗದಲ್ಲಿ ದ್ವಿಚಕ್ರ ವಾಹನ ಸಂಘದ ಭೂಮಿ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮಧ್ಯಾಹ್ನ 12 ಗಂಟೆಗೆ ನಗರದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಗುರು ಭವನದ ಭೂಮಿ ಪೂಜಾ ಹಾಗೂ ಶೈಕ್ಷಣಿಕ ಕಾರ್ಯಾಗಾರ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳುವರು. ಮ 1 ಗಂಟೆಗೆ ನಗರದ ಎಸ್.ಪಿ. ಕಚೇರಿ ಹತ್ತಿರದಲ್ಲಿ ಎಸ್.ಪಿ. ಕಚೇರಿಯಿಂದ ಎ.ಪಿ.ಎಮ್.ಸಿ ಮುಖ್ಯ ರಸ್ತೆಯವರೆಗಿನ ರಸ್ತೆ ಅಭಿವೃದ್ಧಿ ಕಾಮಗಾರಿಯ ಭೂಮಿ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಸಂಜೆ 5 ಗಂಟೆಗೆ ಶಿರಹಟ್ಟಿ ತಾಲೂಕು ಮಾಗಡಿಯಲ್ಲಿ ಸಿ.ಸಿ.ರಸ್ತೆ ಕಾಮಗಾರಿಯ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಸಂಜೆ 6 ಗಂಟೆಗೆ ಶಿರಹಟ್ಟಿ ಪಟ್ಟಣದಲ್ಲಿ ಸಿ.ಸಿ. ರಸ್ತೆ ಕಾಮಗಾರಿ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

## ಇಂದು ತ್ರೈಮಾಸಿಕ ಕೆಡಿಪಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್. ಕೆ.ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 27 ರಂದು ಅಪರಾಹ್ನ 12 ಗಂಟೆಗೆ ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ತಿಳಿಸಿದ್ದಾರೆ.

### ಎಸ್‌ಸಿಪಿ/ ಟಿಎಸ್‌ಪಿ ಪ್ರಗತಿ ಪರಿಶಿಲನಾ ಸಭೆಯಲ್ಲಿ ಜಿ.ಪಂ ಸಿಇಓ ಭರತ್ ಎಸ್

# ಫಲಾನುಭವಿಗಳ ಆಯ್ಕೆ ಪಾರದರ್ಶಕವಾಗಿರಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಪ.ಜಾ/ಪ.ಪಂ. ಉಪಹಂಚಿಕೆ ಯೋಜನೆಯಡಿ ಫಲಾನುಭವಿಗಳ ಆಯ್ಕೆಯಲ್ಲಿ ಪಾರದರ್ಶಕತೆ ಇರಬೇಕು. ಅರ್ಹ ಫಲಾನುಭವಿಗಳಿಗೆ ಯೋಜನೆಯ ಸೌಲಭ್ಯ ನಿಗದಿತ ಕಾಲಾವಧಿಯಲ್ಲಿಯೇ ದೊರಕುವಂತಾಗಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಲಾಗಿದ್ದ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ.ಜಾ/ಪ.ಪಂ. ಉಪಹಂಚಿಕೆ ಯೋಜನೆಗೆ ಸಂಬಂಧಿಸಿದಂತೆ ಫಲಾನುಭವಿಗಳ ಆಯ್ಕೆ ಮಾಡುವಾಗ ಪಾರದರ್ಶಕತೆಯಿರಬೇಕು. ತಾಲೂಕು ಮಟ್ಟದಲ್ಲಿ ಎಸ್‌ಸಿಪಿ/ಟಿಎಸ್‌ಪಿ ಪ್ರಗತಿ ಪರಿಶೀಲನಾ ಸಭೆಯನ್ನು ನಿಯಮಿತವಾಗಿ ಜರುಗಿಸಬೇಕು. ಅರ್ಹ ಫಲಾನುಭವಿಗಳಿಗೆ ಯೋಜನೆಯ ಸೌಲಭ್ಯ ವಿಳಂಬವಾಗದೇ ಶೀಘ್ರಗತಿಯಲ್ಲಿ



ತಲುಪುವಂತಾಗಬೇಕು. ಯಾವುದೇ ಕಾರಣಕ್ಕೂ ಬಿಡುಗಡೆಯಾದ ಅನುದಾನ ಲ್ಯಾಪ್ಸ್ ಆಗದಂತೆ ನೋಡಿಕೊಳ್ಳಬೇಕು. ಸದರಿ ಯೋಜನೆಯಡಿ ಕೈಗೊಳ್ಳಲಾದ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು ಹಾಗೂ ಇಲಾಖಾವಾರು ಸಾಧಿಸಿದ ಪ್ರಗತಿ ವಿವರವನ್ನು ಇಲಾಖೆ ಅಂತರ್ಜಾಲದಲ್ಲಿ ತಪ್ಪದೇ ಅಪ್‌ಡೇಟ್ ಮಾಡಬೇಕು ಎಂದು ಜಿ.ಪಂ ಸಿ.ಇ.ಓ ಭರತ್ ಎಸ್ ನಿರ್ದೇಶನ ನೀಡಿದರು.

ಸಭೆಯಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು, ನಗರಾಭಿವೃದ್ಧಿ ಕೋಶ, ತೋಟಗಾರಿಕೆ, ಹೆಸ್ಕಾಂ, ಕೌಶಲ್ಯಾಭಿವೃದ್ಧಿ, ಶಾಲಾ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೃಷಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಆರ್ಥಿಕ ಮತ್ತು ಭೌತಿಕ ಪ್ರಗತಿ ಪರಿಶೀಲನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವನಗೌಡ ಕೊಟ್ಟೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಶಶಿಕಾಂತ ಕೋಟಿಮನಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಮಾತನಾಡಿ, 2024–25ನೇ ಸಾಲಿನ ಪರಿಶಿಷ್ಟ ಜಾತಿ ಉಪ ಹಂಚಿಕೆ (ಎಸ್‌ಸಿಎಸ್‌ಪಿ) ಯೋಜನೆಯಡಿ ಆಗಸ್ಟ್ 2024ರ ಅಂತ್ಯದವರೆಗೆ ವಿವಿಧ ಇಲಾಖೆಗಳಡಿ ಒಟ್ಟಾರೆ 4453.89 ಲಕ್ಷ ರೂ.ಅನುದಾನ ಬಿಡುಗಡೆಯಾಗಿದ್ದು, ಆ ಪೈಕಿ 2898.34 ಲಕ್ಷ ರೂ.ಖರ್ಚಾಗಿದೆ. 24488 ಫಲಾನುಭವಿಗಳು ಯೋಜನೆಯ ಸೌಲಭ್ಯ ಪಡೆದಿದ್ದು, ಶೇ.65ರಷ್ಟು ಪ್ರಗತಿಯಾಗಿದೆ. ಪರಿಶಿಷ್ಟ ಪಂಗಡ ಉಪಹಂಚಿಕೆ (ಟಿಎಸ್‌ಪಿ) ಯೋಜನೆಯಡಿ ವಿವಿಧ ಇಲಾಖೆಗಳಡಿ 1133.54 ಲಕ್ಷ ರೂ.ಬಿಡುಗಡೆಯಾಗಿದ್ದು, ಆ ಪೈಕಿ 758.50 ಲಕ್ಷ ರೂ. ಖರ್ಚಾಗಿದೆ. 2152 ಫಲಾನುಭವಿಗಳು ಯೋಜನೆಯ ಸೌಲಭ್ಯ ಪಡೆದಿದ್ದು, ಶೇ. 67ರಷ್ಟು ಪ್ರಗತಿಯಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

### 2500 ಹುದ್ದೆಗಳಿಗಾಗಿ 50ಕ್ಕೂ ಹೆಚ್ಚು ಕಂಪನಿಗಳು ಭಾಗಿ

# ಬೃಹತ್ ಉದ್ಯೋಗ ಮೇಳ ಸೆ.30ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜೆ.ಟಿ. ಕಾಲೇಜು ಆವರಣದಲ್ಲಿ ಸೆ. 30ರಂದು ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ಗುರುವಾರ ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿ, ಹುಬ್ಬಳ್ಳಿಯ ಉದ್ಯೋಗ ಮಾಹಿತಿ ಹಾಗೂ ತರಬೇತಿ ಕೇಂದ್ರ, ಎಸ್.ಆರ್. ಬೊಮ್ಮಾಯಿ ಟ್ರಸ್ಟ್, ಕೆಎಲ್‌ಇ ಸಂಸ್ಥೆಯ ಜಗದ್ಗುರು ತೋಂಟದಾರ್ಯ ಮಹಾವಿದ್ಯಾಲಯ ಗದಗ ಹಾಗೂ ಇನ್ಸ್‌ಪೈರಾ ಟೆಕ್ನಾಲಜೀಸ್ ಸಹಯೋಗದಲ್ಲಿ ಈ ಮೇಳ ನಡೆಯಲಿದೆ.

ಪದವೀಧರ ಮತಕ್ಷೇತ್ರವನ್ನು ಪ್ರತಿನಿಧಿಸುತ್ತಿರುವ ಕಾರಣಕ್ಕೆ ಪದವೀಧರ ಯುವಕರಿಗೆ ಉದ್ಯೋಗ ದೊರಕಿಸಿಕೊಡುವುದು ನನ್ನ ಜವಾಬ್ದಾರಿ. ಆ ನಿಟ್ಟಿನಲ್ಲಿ ಮೊದಲ ಬಾರಿಗೆ ಚುನಾವಣೆ ಎದುರಿಸುವ ಸಂದರ್ಭದಲ್ಲಿ ನೀಡಿದ ಭರವಸೆಯಂತೆ ಹುಬ್ಬಳ್ಳಿಯಲ್ಲಿ ಉದ್ಯೋಗ ಮಾಹಿತಿ ಮತ್ತು ತರಬೇತಿ ಕೇಂದ್ರವನ್ನು ಸ್ಥಾಪಿಸಲಾಗಿದೆ. ಅಂತೆಯೇ ಉತ್ತರಕನ್ನಡ, ಹಾವೇರಿ, ಗದಗ ಮತ್ತು ಧಾರವಾಡದಲ್ಲಿ ಉದ್ಯೋಗ ಮೇಳ ಆಯೋಜಿಸಿ ಯುವಕರಿಗೆ ಉದ್ಯೋಗ ದೊರಕಿಸುವ



ನಿಟ್ಟಿನಲ್ಲಿ ಕೆಲಸ ಮಾಡಿರುವೆ. ಅದರ ಮುಂದುವರಿದ ಭಾಗವಾಗಿ ಗದಗ ಜಿಲ್ಲೆಯಲ್ಲಿ ಮತ್ತೊಮ್ಮೆ ಉದ್ಯೋಗ ಮೇಳ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಈ ಉದ್ಯೋಗ ಮೇಳದಲ್ಲಿ 2500 ಹುದ್ದೆಗಳಿಗಾಗಿ 50ಕ್ಕೂ ಹೆಚ್ಚು ಕಂಪನಿಗಳು ಆಗಮಿಸಲಿವೆ. ಎಸೆಸೆಲ್ಸಿಯಿಂದ ಪದವಿ, ಸ್ನಾತಕೋತ್ತರ ಪದವಿ ಪಡೆದವರೂ ಭಾಗವಹಿಸಬಹುದು. ಈಗಾಗಲೇ ಆನ್‌ಲೈನ್ ನೋಂದಣಿ ಮಾಡಿಕೊಳ್ಳಲಾಗಿದೆ. ಸ್ಥಳದಲ್ಲಿಯೇ ನೋಂದಣಿ ಮಾಡಿಕೊಳ್ಳಲು ಅವಕಾಶವಿದೆ. ಗದಗ ಮಾತ್ರವಲ್ಲದೇ ನೆರೆಯ ಜಿಲ್ಲೆಯ ಯುವಕರು ಇದರಲ್ಲಿ ಭಾಗವಹಿಸಬಹುದಾಗಿದೆ ಎಂದು ತಿಳಿಸಿದರು.

ಸೆ. 30ರಂದು ಬೆಳಗ್ಗೆ 10 ಗಂಟೆಗೆ ಉದ್ಘಾಟನಾ ಸಮಾರಂಭ ನಡೆಯಲಿದೆ. ಸಂಸದ ಬಸವರಾಜ ಬೊಮ್ಮಾಯಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಸಚಿವ ಕಳಕಪ್ಪ ಬಂಡಿ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಹುಬ್ಬಳ್ಳಿ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಎಸ್.ಪಿ. ಸಂಶಿಮಠ, ಬಾಷ್ ಇಂಡಿಯಾ ಫೌಂಡೇಶನ್‌ನ ಪ್ಲೇಸ್‌ಮೆಂಟ್ ಹೆಡ್ ಕಲೀಮ್ ಎಸ್., ಸುಧೀರ್ ಪಿಡ್ಡಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಕೆಎಲ್‌ಇ ಅಧ್ಯಕ್ಷ ಶಂಕ್ರಣ್ಣ ಮುನವಳ್ಳಿ ಅಧ್ಯಕ್ಷತೆ ವಹಿಸುವರು ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಇನ್ಸ್‌ಪೈರಾ ಟೆಕ್ನಾಲಜಿಯ ಸಂಸ್ಥಾಪಕ ಚಂದ್ರಶೇಖ ಅಣ್ಣಿಗೇರಿ, ಜೆಟಿ ಕಾಲೇಜಿನ ಪ್ರಾಚಾರ್ಯ ಪಿ.ಜಿ. ಪಾಟೀಲ ಉಪಸ್ಥಿತರಿದ್ದರು.

ಈ ಬಾರಿ ಉದ್ಯೋಗ ಮೇಳದಲ್ಲಿ ಯುವಕರಿಗೆ ಸ್ವ ಉದ್ಯೋಗ, ಕೈಗಾರಿಕೆ ಸ್ಥಾಪನೆಗೆ ಅನುಕೂಲ ಆಗುವಂತೆ ಎರಡು ವಿಶೇಷ ಉಪನ್ಯಾಸ ಏರ್ಪಡಿಸಲಾಗಿದೆ. ಜಿಲ್ಲೆಯಲ್ಲಿ ಯಾವ ರೀತಿಯ ಉದ್ಯೋಗಕ್ಕೆ ಪ್ರೋತ್ಸಾಹ, ಪೂರಕ ವಾತಾವರಣವಿದೆ ಎನ್ನುವ ಕುರಿತು ಸಿಡಾಕ್ ಹಾಗೂ ಜಿಲ್ಲಾ ಕೈಗಾರಿಕೆ ತರಬೇತಿ ಕೇಂದ್ರದ ಮುಖ್ಯಸ್ಥರು ಉಪನ್ಯಾಸ ನೀಡಲಿದ್ದಾರೆ ಎಂದು ಎಸ್.ವಿ. ಸಂಕನೂರು ಮಾಹಿತಿ ನೀಡಿದರು.

## ಕನ್ನಡ ಜ್ಯೋತಿ ರಥ ನಾಳೆ ಗದುಗಿಗೆ



■ವಿಜಯಸಾಕ್ಷಿ ಸುದ್ದಿ, ಗದಗ

ಮಂಡ್ಯದಲ್ಲಿ ಜರುಗಲಿರುವ 87ನೇ ಅಖಿಲ ಭಾರತ ಸಾಹಿತ್ಯ ಸಮ್ಮೇಳನದಂಗವಾಗಿ ಕನ್ನಡ ಜ್ಯೋತಿ ಹೊತ್ತ ಕನ್ನಡ ರಥಯಾತ್ರೆ ಗದಗ ಜಿಲ್ಲೆಯಲ್ಲಿ ಸೆ. 28 ಹಾಗೂ 29ರಂದು ಸಂಚರಿಸಲಿದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ತಿಳಿಸಿದ್ದಾರೆ.

ಸೆ. 28ರಂದು ಬೆಳಿಗ್ಗೆ 9 ಗಂಟೆಗೆ ಲಕ್ಷ್ಮೇಶ್ವರ, ಮಧ್ಯಾಹ್ನ 12 ಗಂಟೆಗೆ ಶಿರಹಟ್ಟಿ, ಮಧ್ಯಾನ್ಯ 3 ಗಂಟೆಗೆ ಮುಂಡರಗಿಯಲ್ಲಿ ಸಂಚರಿಸಿ, ಸಾಯಂಕಾಲ 4 ಗಂಟೆಗೆ ಗದುಗಿಗೆ ಆಗಮಿಸಲಿದೆ. ಸೆ.29ರಂದು ಗದುಗಿನಿಂದ ಹೊರಟು ಬೆಳಿಗ್ಗೆ 11 ಗಂಟೆಗೆ ಗಜೇಂದ್ರಗಡ, ಮಧ್ಯಾಹ್ನ 1 ಗಂಟೆಗೆ ರೋಣ ಹಾಗೂ ಸಂಜೆ 5 ಗಂಟೆಗೆ ನರಗುಂದಕ್ಕೆ ಆಗಮಿಸಲಿದೆ.

ಈ ರಥಯಾತ್ರೆಯಲ್ಲಿ ಜನಪ್ರತಿನಿಧಿಗಳು, ಸಾಹಿತಿಗಳು, ಬರಹಗಾರರು, ನಾಡು–ನುಡಿ ಚಿಂತಕರು, ಹೋರಾಟಗಾರರು, ಸಾಹಿತ್ಯ ಪರಿಷತ್ತಿನ ಜಿಲ್ಲಾ, ತಾಲೂಕು, ಹೋಬಳಿ ಘಟಕಗಳ ಪದಾಧಿಕಾರಿಗಳು, ಪರಿಷತ್ತಿನ ಸದಸ್ಯರು, ಕನ್ನಡಪರ ಸಂಘಟನೆಗಳು, ರೈತ, ಕಾರ್ಮಿಕ ಸಂಘಟನೆಗಳು, ವಿದ್ಯಾಸಂಸ್ಥೆಗಳು, ರೋಟರಿ, ಲಯನ್ಸ್ ಮುಂತಾದ ಸಂಘ ಸಂಸ್ಥೆಗಳು, ಎನ್.ಸಿ.ಸಿ., ಎನ್.ಎಸ್.ಎಸ್. ರೆಡ್ ಕ್ರಾಸ್ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಮನವಿ ಮಾಡಿದ್ದಾರೆ.

ಪ್ರತಿ ತಾಲೂಕುಗಳಿಗೆ ಕನ್ನಡ ರಥ ಆಗಮಿಸಿದ ಸಂದರ್ಭದಲ್ಲಿ ಆಯಾ ತಾಲೂಕುಗಳ ತಹಸೀಲ್ದಾರರ ನೇತೃತ್ವದಲ್ಲಿ ರಥಯಾತ್ರೆ ಜರುಗಲಿದೆ. ತಾಲೂಕಾ ಕಸಾಪ ಪದಾಧಿಕಾರಿಗಳು, ಕನ್ನಡಪರ ಸಂಘಟನೆಗಳು, ಸಾಹಿತಿ–ಕಲಾವಿದರು, ಕನ್ನಡಪರ ಕಾರ್ಯಕರ್ತರು, ಆಜೀವ ಸದಸ್ಯರು, ವಿದ್ಯಾರ್ಥಿಗಳು ಭಾಗವಹಿಸುವಂತೆ ವಿವೇಕಾನಂದಗೌಡ ಪಾಟೀಲ ಮನವಿ ಮಾಡಿದ್ದಾರೆ.

## ಪಿಡಿಓ ಅಮಾನತಿಗೆ ಆಗ್ರಹ



■ವಿಜಯಸಾಕ್ಷಿ ಸುದ್ದಿ, ನರಗುಂದ

ನರೇಗಾ ಯೋಜನೆಯಲ್ಲಿ ಕೆಲಸ ಮಾಡಿರುವ ಕೂಲಿ ಕಾರ್ಮಿಕರಿಗೆ ಸರಿಯಾಗಿ ಕೂಲಿ ಮೊತ್ತ ಪಾವತಿಸದೇ ಸತಾಯಿಸುತ್ತಿರುವ ಚಿಕ್ಕನರಗುಂದ ಗ್ರಾ.ಪಂ ಪಿಡಿಓ ವಿರುದ್ಧ ಕೂಲಿ ಕಾರ್ಮಿಕರು ಗ್ರಾಮ ಪಂಚಾಯತಿ ಕಾರ್ಯಾಲಯಕ್ಕೆ ಮುತ್ತಿಗೆ ಹಾಕಿ ಆಕ್ರೋಶ ವ್ಯಕ್ತಪಡಿಸಿದರು.

ಚಿಕ್ಕನರಗುಂದ ಗ್ರಾ.ಪಂನಲ್ಲಿ ನರೇಗಾ ಯೋಜನೆಯಲ್ಲಿ ಬದು ನಿರ್ಮಾಣ ಕಾಮಗಾರಿಯಲ್ಲಿ ಕೆಲಸ ಮಾಡಿರುವ ಕೂಲಿ ಕಾರ್ಮಿಕರು ಪಿಡಿಓ ಎಚ್.ಕೆ. ಅರಳಿಕಟ್ಟಿ ಹಾಗೂ ಜನಪ್ರತಿನಿಧಿಗಳಿಗೆ ಹಿಡಿಶಾಪ ಹಾಕಿ ಅಸಮಾಧಾನ ಹೊರಹಾಕಿದರು.

ನಾಲ್ಕೈದು ತಿಂಗಳಿಂದ ಪ್ರತಿದಿನ ಕೂಲಿ ಪಾವತಿ ನಿರೀಕ್ಷಿಸಿ ಬರುತ್ತಿದ್ದರೂ, ಪಿಡಿಓ ಅವರು ಬೇಜವಾಬ್ದಾರಿಯ ಉತ್ತರ ನೀಡುತ್ತಿದ್ದಾರೆ. ಜೀವನ ನಿರ್ವಹಣೆ ಕಷ್ಟವಾಗಿದೆ ಎಂದು ಗ್ರಾಮೀಣ ಉದ್ಯೋಗ ಸಹಾಯಕ ನಿರ್ದೇಶಕ ಸಂತೋಷ ಪಾಟೀಲ ಅವರಿಗೆ ತಮ್ಮ ಅಳಲು ತೋಡಿಕೊಂಡರು.

ಕೂಲಿ ಕೆಲಸ ಮಾಡಿಯಾದರೂ ಬದುಕು ಸಾಗಿಸಬೇಕೆಂಬ ಕೂಲಿ ಕಾರ್ಮಿಕರ ಆಸೆಗೆ ಅಧಿಕಾರಿ ಹಾಗೂ ಜನಪ್ರತಿನಿಧಿಗಳು ತಣ್ಣೀರು ಎರಚಿದ್ದಾರೆ. ಕೆಲಸ ಮಾಡಿದ ಕೂಲಿ ಮೊತ್ತ ನಾಲ್ಕು ದಿನದಲ್ಲಿ ಪಾವತಿ ಮಾಡಬೇಕು. ಪಿಡಿಓ ಅರಳಿಕಟ್ಟಿ ಮೇಲೆ ಕ್ರಮ ಜರುಗಿಸಿ ಅಮಾನತು ಮಾಡಬೇಕು ಎಂದು ಎಚ್ಚರಿಕೆ ನೀಡಿದ್ದಾರೆ.

ಪ್ರತಿಭಟನೆಯಲ್ಲಿ ಶಿವಪ್ಪ ಸಾತಣ್ಣವರ, ಶಿವಾನಂದ ಬುಳ್ಳನ್ನವರ, ಮೈಲಾರಿ ಚನ್ನಪ್ಪಗೌಡ್ರ, ಶ್ರೀಕಾಂತ್ ಕೋಣನ್ನವರ, ಮಂಜುನಾಥ ಹೊಸಗಾಣಿಗೇರ, ಕಲ್ಲಪ್ಪ ಹಾದಿಮನಿ, ಅಪ್ಪಣ್ಣ ಕುರಿ, ಸಂಗಮೇಶ ತೊರಗಲ್, ಮಲ್ಲಪ್ಪ ಚಲವಾದಿ, ದೇವಪ್ಪ ಚಲವಾದಿ ಮುಂತಾದವರಿದ್ದರು.

### ಬೇಡಿಕೆಗಳಿಗೆ ಸ್ಪಂದಿಸುವಂತೆ ಗ್ರಾಮ ಆಡಳಿತಾಧಿಕಾರಿಗಳಿಂದ ಧರಣಿ

# ಕಾರ್ಯದೊತ್ತಡ ಹೆಚ್ಚಿಸಬೇಡಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯದ ಗ್ರಾಮ ಆಡಳಿತ ಅಧಿಕಾರಿಗಳ ಸಮಸ್ಯೆಗಳು ಹಾಗೂ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಪಟ್ಟಣದ ತಹಸೀಲ್ದಾರ ಕಚೇರಿ ಎದುರಿನಲ್ಲಿ ಗ್ರಾಮ ಆಡಳಿತ ಅಧಿಕಾರಿಗಳು ಗುರುವಾರ ಧರಣಿ ಕೈಗೊಂಡರು.

ಈ ಸಂದರ್ಭದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳ ಸಂಘದ ತಾಲೂಕಾಧ್ಯಕ್ಷ ಡಿ.ಎಸ್. ಕುಲಕರ್ಣಿ ಮಾತನಾಡಿ, ಸರಕಾರದ ವತಿಯಿಂದ ಕನಿಷ್ಠ ಸೌಲಭ್ಯಗಳನ್ನು ನೀಡದೆ ಹೆಚ್ಚಿನ ಒತ್ತಡವನ್ನು ಗ್ರಾಮ ಆಡಳಿತ ಅಧಿಕಾರಿಗಳ ಮೇಲೆ ಹೇರುತ್ತಿದ್ದು, ಇದು ನಮಗೆ ಆಗುತ್ತಿರುವ ಅನ್ಯಾಯವಾಗಿದೆ. ಸರಕಾರಿ ರಜಾ ದಿನಗಳಲ್ಲಿಯೂ ಸಹ ಕೆಲಸವನ್ನು ಮಾಡಬೇಕಾಗಿದ್ದು, ಆನ್‌ಲೈನ್ ತಂತ್ರಾಂಶಗಳ ಮೂಲಕ ಹೆಚ್ಚು ಕೆಲಸಗಳನ್ನು ನಿರ್ವಹಿಸಬೇಕಿದೆ. ಅದಕ್ಕೆ ತಕ್ಕಂತೆ ಮೊಬೈಲ್, ಲ್ಯಾಪ್‌ಟಾಪ್‌ಗಳನ್ನು




ನೀಡಬೇಕು. ಎಲ್ಲ ಇಲಾಖೆಗಳಲ್ಲಿ ನೀಡುವಂತೆ ನಮಗೂ ಸಹ ಪತಿ–ಪತ್ನಿಯರಿಗೆ ವರ್ಗಾವಣೆಗೆ ಅವಕಾಶ ಕಲ್ಪಿಸಬೇಕು. ಅಲ್ಲದೆ ಗ್ರಾಮ ಸಹಾಯಕರ ಹುದ್ದೆಗಳಿಗೆ ಯಾವುದೇ ಸೇವಾ ಭದ್ರತೆ ಇಲ್ಲದಂತಾಗಿದ್ದು, ಕೂಡಲೇ ಅವರನ್ನು ಖಾಯಂ ಮಾಡಿ ಸೇವಾ ಭದ್ರತೆ ಒದಗಿಸಬೇಕು ಎಂದು ಒತ್ತಾಯಿಸಿದರು.

ಇಲಾಖೆಯಲ್ಲಿ ಈಗಾಗಲೇ ಅನೇಕ ತಂತ್ರಾಂಶಗಳನ್ನು ಅಭಿವೃದ್ಧಿಪಡಿಸಿದ್ದು, ಅವುಗಳ ಮೂಲಕ ಕಾರ್ಯನಿರ್ವಹಿಸಲು ಗ್ರಾಮ ಆಡಳಿತಾಧಿಕಾರಿಗಳಿ ಮತ್ತು ಸಹಾಯಕರಿಗೆ ಒತ್ತಡ ಹೇರಲಾಗುತ್ತಿದೆ. ಇವುಗಳನ್ನು ಕೈಬಿಟ್ಟು ಎಲ್ಲರಂತೆ ನಮ್ಮನ್ನು ಗಣನೆಗೆ ತೆಗೆದುಕೊಂಡು, ತಾಂತ್ರಿಕ ಹುದ್ದೆಗಳಿಗೆ ನೀಡುವ ವೇತನವನ್ನು ನೀಡಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷ ಎಚ್.ಕೃಷ್ಣಮೂರ್ತಿ, ಎನ್.ಬಿ. ಕನೋಜ, ಪಿ.ಎಲ್. ವಿಭೂತಿ, ಆರ್.ಎನ್. ನೆಗಳೂರ, ಬಿ.ವೈ. ಮಲ್ಲಿಗವಾಡ, ಸುಬೇದಖಾನ್ ಪಠಾಣ, ಅರುಣ ದೊಡ್ಡಮನಿ, ಎನ್.ಐ. ಸೊನ್ನದ, ಸುಷ್ಮಾ ವಡಕಪ್ಪನವರ, ನಿರ್ಮಲಾ ಕೊಪ್ಪದಮಠ, ಲಕ್ಷ್ಮೀ ಓಲೇಕಾರ, ತಸ್ಮೀಯಾ ಮುಲ್ಲಾ ಮುಂತಾದವರಿದ್ದರು.

## ಸಾಕ್ಷಿ ಸುಭಾಷಿತ

ಯಶಸ್ಸು ವಾಸ್ತವವನ್ನು ಬದಲಾಯಿಸುವುದಿಲ್ಲ,ವಾಸ್ತವದ ಹಿಂದಿನ ಮನಸ್ಥಿತಿಯನ್ನು ಬದಲಾಯಿಸುತ್ತದೆ.

–ಸುಭಾಷಿತ

## ಸಂಪಾದಕೀಯ

# ಯುಜಿಸಿ ಮಾರ್ಗಸೂಚಿ ಪಾಲನೆ ಆಗಲಿ

ರಾಜ್ಯದಲ್ಲಿ ಸದ್ಯ ಪ್ರತಿಯೊಂದು ವಿಷಯವು ಹೈಕೋರ್ಟ್‌ನಲ್ಲಿ ನಿರ್ಧಾರ ಆಗುವಂತಾಗಿದೆ. ಮುಡಾ ಹಗರಣದಲ್ಲಿ ಸಿದ್ದರಾಮಯ್ಯ ಮೇಲಿನ ಆರೋಪದ ಕುರಿತು ಹೈಕೋರ್ಟ್ ನೀಡಿದ ತೀರ್ಪು ಇಡೀ ದೇಶದ ಗಮನ ಸೆಳೆದಿದೆ. ಅದೇ ರೀತಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಸಿದ್ದರಾಮಯ್ಯ ವಿರುದ್ಧ ತನಿಖೆಗೆ ಸೂಚನೆ ನೀಡುವ ಮೂಲಕ ನ್ಯಾಯಾಂಗ ವ್ಯವಸ್ಥೆ ಬಗ್ಗೆ ಸಾಕಷ್ಟು ಚರ್ಚೆಯಾಗುತ್ತಿದೆ.

ಈಗ ಹೈಕೋರ್ಟ್ ಮತ್ತೊಂದು ಮಹತ್ವದ ತೀರ್ಪು ನೀಡುವ ಮೂಲಕ ಯುಜಿಸಿ ಮಾರ್ಗಸೂಚಿಗಳನ್ನು ಎತ್ತಿ ಹಿಡಿಯುವ ಪ್ರಯತ್ನ ಮಾಡಿದೆ. ರಾಜ್ಯದಲ್ಲಿ ಅತಿಥಿ ಉಪನ್ಯಾಸಕರ ನೇಮಕಾತಿ ಸಂದರ್ಭದಲ್ಲಿ ಯುಜಿಸಿ ಮಾರ್ಗಸೂಚಿಗಳನ್ನ ಪಾಲಿಸಿಯೇ ನೇಮಕಾತಿ ಮಾಡಿಕೊಳ್ಳಬೇಕು ಎಂದು ಹೈಕೋರ್ಟ್ ತೀರ್ಪು ನೀಡಿದೆ.

ಹೈ ಕೋರ್ಟ್‌ನ ಈ ತೀರ್ಪು ಯುಜಿಸಿ ಮಾರ್ಗಸೂಚಿ ಅನ್ವಯ ಪದವಿ ಮತ್ತು ಪ್ರವೇಶ ಪರೀಕ್ಷೆಗಳನ್ನ ಉತ್ತೀರ್ಣರಾದವರಿಗೆ ಅನುಕೂಲ ಕಲ್ಪಿಸಿದೆ. ಉಪನ್ಯಾಸಕ ಹುದ್ದೆಗಾಗಿ ಸಾಕಷ್ಟು ಕಷ್ಟಪಟ್ಟು ಕೆ ಸೆಟ್, ನೆಟ್, ಪಿಎಚ್ ಡಿ ಪದವಿಗಳನ್ನು ಪಡೆದು ಅರ್ಹತೆ ಗಿಟ್ಟಿಸಿಕೊಂಡು, ಸರ್ಕಾರದ ನೇಮಕಾತಿಗಾಗಿ ಕಾದು ಕುಳಿತವರಿದ್ದಾರೆ.

ಆದರೆ ರಾಜ್ಯ ಸರ್ಕಾರದ ಉನ್ನತ ಶಿಕ್ಷಣ ಇಲಾಖೆ, ಯುಜಿಸಿ ಮಾರ್ಗಸೂಚಿಗಳನ್ನ ಗಾಳಿಗೆ ತೂರಿ ಕೇವಲ ಸ್ನಾತಕೊತ್ತರ ಪದವಿಯಲ್ಲಿ ಪಡೆದ ಅಂಕಗಳನ್ನು ಆಧರಿಸಿ, ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಂಡಿತ್ತು.

ಸರ್ಕಾರದ ಈ ನಿರ್ಧಾರವನ್ನು ಪ್ರಶ್ನಿಸಿ ಕೆಲವರು ಹೈಕೋರ್ಟ್ ಮೆಟ್ಟಿಲೇರಿದ್ದರು. ಅರ್ಜಿದಾರರ ಮನವಿಯನ್ನ ಪುರಸ್ಕರಿಸಿದ ಹೈಕೋರ್ಟ್, ಯುಜಿಸಿ ಮಾರ್ಗಸೂಚಿ ಅನ್ವಯವೇ ಅತಿಥಿ ಉಪನ್ಯಾಸಕರನ್ನ ನೇಮಕ ಮಾಡಿಕೊಳ್ಳಬೇಕು ಎಂದು ಆದೇಶಿಸಿದೆ.

ಉಪನ್ಯಾಸಕರ ಹುದ್ದೆಯ ಅರ್ಹತೆಯನ್ನು ಪಡೆದವರನ್ನೆ ಅತಿಥಿ ಉಪನ್ಯಾಸಕರ ಹುದ್ದೆಗೆ ನೇಮಕ ಮಾಡಿಕೊಂಡಲ್ಲಿ, ಭವಿಷ್ಯದಲ್ಲಿ ಅವರ ಸೇವೆ ಖಾಯಂಗೊಳಿಸಲು ಸಾಧ್ಯವಿದೆ. ಮತ್ತು ಅಂತಹ ಖಾಯಂ ಗೊಳಿಸುವ ಪ್ರಕ್ರಿಯೆಗೆ ಯಾವುದೇ ವಿರೋಧವು ಇರುವುದಿಲ್ಲ.

---

**ಡಿ.ಸಿ ಪಾವಟೆ ಕಾಲೇಜಿನಲ್ಲಿ ಕರ್ನಾಟಕ ಏಕೀಕರಣ ವೀರರ ಯಶೋಗಾಥೆ ಕುರಿತು ಉಪನ್ಯಾಸ**

# ಶ್ರೀನಿವಾಸರಾಯರದು ಆದರ್ಶಮಯ ಬದುಕು

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತದ ಸ್ವಾತಂತ್ರ್ಯ ಹೋರಾಟ ಮತ್ತು ಕರ್ನಾಟಕ ಏಕೀಕರಣಕ್ಕೆ ದುಡಿದ ಮಹನೀಯರಾದ ನಿಟ್ಟೂರು ಶ್ರೀನಿವಾಸರಾಯರು 101 ವರ್ಷಗಳ ತುಂಬು ಜೀವನವನ್ನು ಸಾಗಿಸಿದ್ದರು. ಅವರ ಬದುಕು ಎಲ್ಲರಿಗೂ ಆದರ್ಶಮಯವಾದುದು ಎಂದು ಕಸಾಪ ತಾಲೂಕಾಧ್ಯಕ್ಷರಾದ ಡಾ.ರಶ್ಮಿ ಅಂಗಡಿ ನುಡಿದರು.

ಅವರು ಇತ್ತೀಚೆಗೆ ನಗರದ ಡಿ.ಸಿ. ಪಾವಟೆ ಶಿಕ್ಷಣ ಮಹಾವಿದ್ಯಾಲಯದಲ್ಲಿ ಕನ್ನಡ ಸಾಹಿತ್ಯ ಮತ್ತು ಸಂಸ್ಕೃತಿ ವೇದಿಕೆ ಭೈರನಟ್ಟಿ, ಗದಗ ಜಿಲ್ಲಾ ಕ.ಸಾ.ಪ ಮತ್ತು ಗದಗ ತಾಲೂಕಾ ಕ.ಸಾ.ಪ ವತಿಯಿಂದ ಜರುಗಿದ 'ಕರ್ನಾಟಕ ಏಕೀಕರಣ ವೀರರ ಯಶೋಗಾಥೆ' ಅಡಿಯಲ್ಲಿ ನಿಟ್ಟೂರು ಶ್ರೀನಿವಾಸರಾಯರ ಕುರಿತು ಉಪನ್ಯಾಸ ನೀಡುತ್ತಿದ್ದರು.



ವಿಜ್ಞಾನದಲ್ಲಿ ಆಸಕ್ತಿ ಇದ್ದ ಶ್ರೀನಿವಾಸರಾಯರು ತಂದೆ-ಯ ಅನಾರೋಗ್ಯದ ಕಾರಣದಿಂದ ಮದರಾಸಿನ ಕಾನೂನು ಮಹಾವಿದ್ಯಾಲಯಕ್ಕೆ ತೆರಳಿ ಅಲ್ಲಿ ಕಾನೂನು ಓದಿದರು. ಬೆಂಗಳೂರಿನಲ್ಲಿ ತಮ್ಮ ಕಾನೂನು ವೃತ್ತಿಯನ್ನು ಆರಂಭಿಸಿದ ಅವರು ಕೆಲವೇ ವರ್ಷದಲ್ಲಿ ಶ್ರೇಷ್ಠ ವಕೀಲರಾಗಿ ಹೆಸರುವಾಸಿಯಾದರು. ನಂತರ ಉಚ್ಚ ನ್ಯಾಯಾಲಯದ ನ್ಯಾಯಾಧೀಶರಾಗಿ ಸೇವೆ ಸಲ್ಲಿಸಿದರು. ಗಾಂಧಿಯವರ ಗಾಢ ಪ್ರಭಾವದಿಂದ ತಮ್ಮ 18ನೇ ವಯಸ್ಸಿನಲ್ಲಿಯೇ ಸ್ವಾತಂತ್ರ್ಯ ಚಳುವಳಿಗೆ ಧುಮುಕಿದ್ದ ಅವರು ತಮ್ಮ ಪತ್ನಿ ಪದ್ಮಾವತಿಯವರೊಡನೆ ಸೇರಿಕೊಂಡು ಗಾಂಧೀಜಿಯವರು ಗುಜರಾತಿಯಲ್ಲಿ ಬರೆದ ಲೇಖನಗಳನ್ನು ಮತ್ತು ಅವರ ಆತ್ಮಚರಿತ್ರೆಯನ್ನು ಕನ್ನಡಕ್ಕೆ ಮೊಟ್ಟ ಮೊದಲು ಸತ್ಯ ಸಂಶೋಧನೆ ಎನ್ನುವ ಹೆಸರಲ್ಲಿ ಅನುವಾದ ಮಾಡಿದ್ದಾರೆ.

ಡಿ.ವಿ.ಜಿ, ಗೋಖಲೆಯವರಿಂದ ಪ್ರಭಾವಿತರಾಗಿ ಅವರ ಹೆಸರಿನ ಸಂಸ್ಥೆಗಳನ್ನು ಹುಟ್ಟು ಹಾಕಿ ಸ್ವಾತಂತ್ರ್ಯ ಹೋರಾಟಕ್ಕೆ ಕೊಡುಗೆ ನೀಡಿದರು. ಕನ್ನಡದ ಅಂದಿನ ಬಹುತೇಕ ಹಿರಿಯ ಸಾಹಿತಿಗಳ ಜೊತೆ ಸ್ನೇಹ ಸಂಪರ್ಕ ಹೊಂದಿದ್ದ ಅವರು, ಶಿವರಾಮ ಕಾರಂತರ ಬಾಲ ಪ್ರಪಂಚ ಸೇರಿ ಅನೇಕ ಕೃತಿಗಳನ್ನು ಪ್ರಕಟಿಸಿದ್ದಾರೆ. ಕನ್ನಡ ನಾಡು-ನುಡಿ ಮತ್ತು ಭಾರತದ ಸಮಗ್ರತೆಯನ್ನು ಎತ್ತಿ ಹಿಡಿಯುವಲ್ಲಿ ನಿಟ್ಟೂರು ಶ್ರೀನಿವಾಸರಾಯರ ಕಾರ್ಯ ಸ್ಮರಣೀಯ ಎಂದು ಡಾ. ರಶ್ಮಿ ಅಂಗಡಿ ಅಭಿಪ್ರಾಯಪಟ್ಟರು.

ಭೈರನಟ್ಟಿ ದೊರೆಸ್ವಾಮಿ ವಿರಕ್ತಮಠದ ಶಾಂತಲಿಂಗ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ಡಿ.ಸಿ. ಪಾವಟೆ ಕಾಲೇಜಿನ ಪ್ರಾಚಾರ್ಯರಾದ ಎಸ್.ಪಿ. ಗೌಳಿ ಅಧ್ಯಕ್ಷತೆ ವಹಿಸಿದ್ದರು. ಭೈರನಟ್ಟಿಯ ಕನ್ನಡ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆ ಅಧ್ಯಕ್ಷರಾದ ಆರ್.ಕೆ. ಐನಾಪೂರ ಪ್ರಾಸ್ತಾವಿಕ ಮಾತನಾಡಿದರು. ಕೆ.ಎಸ್. ಪಲ್ಲೇದ ಹಾಗೂ ಶಿಕ್ಷಕರಾದ ಕೆ.ಸಿ. ಪಟ್ಟಣಶೆಟ್ಟಿ ವೇದಿಕೆ ಮೇಲೆ ಉಪಸ್ಥಿತರಿದ್ದರು.

ಕಸಾಪ ಕೋಶಾಧ್ಯಕ್ಷರಾದ ಡಿ.ಎಸ್. ಬಾಪೂರಿ ಅತಿಥಿಗಳಾಗಿ ಭಾಗವಹಿಸಿದ್ದರು. ಕೆ.ಬಿ. ಸಂಕನಗೌಡರ ನಿರೂಪಿಸಿದರು. ಗಿರಿಜಾ ಹಸಬಿ ವಂದಿಸಿದರು.


---

# ಶೈಕ್ಷಣಿಕ ಅಭಿವೃದ್ಧಿಗೆ ಕೈಜೋಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ರೋಟರಿ ಕ್ಲಬ್ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಸದಾ ಕೈ ಜೋಡಿಸುತ್ತಿದ್ದು, ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಮುಂದಾಗುತ್ತಿರುವುದು ಹೆಮ್ಮೆಯ ಸಂಗತಿಯೆಂದು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ಹೇಳಿದರು.

ಅವರು ಬೆಟಗೇರಿ ಸರ್ಕಾರಿ ಶಾಲೆ ನಂ. 7ರಲ್ಲಿ ಗದಗ-ಬೆಟಗೇರಿ ರೋಟರಿ ಕ್ಲಬ್‌ನಿಂದ ಮಕ್ಕಳಿಗೆ ನೋಟ್‌ಬುಕ್ ಹಾಗೂ ಪೆನ್ ವಿತರಿಸಿ ಮಾತನಾಡಿದರು. ಮಕ್ಕಳು ಓದು-ಬರಹವನ್ನು ನಿಖರವಾಗಿ ರೂಢಿಸಿಕೊಳ್ಳಬೇಕು. ಸ್ಪಷ್ಟ ಓದು, ಶುದ್ಧ ಬರಹ, ಸ್ವರಭಾರಯುಕ್ತ ಓದು ಅತೀ ಮುಖ್ಯ ಎಂದರು.



ಗದಗ-ಬೆಟಗೇರಿ ರೋಟರಿ ಕ್ಲಬ್‌ನ್ ಅಧ್ಯಕ್ಷ ಡಾ.ರೇವಣಸಿದ್ದೇಶ್ವರ ಉಪ್ಪಿನ ಮಾತನಾಡಿ, ಸರ್ಕಾರಿ ಶಾಲೆಗಳ ಮಕ್ಕಳ ಶೈಕ್ಷಣಿಕ ಪ್ರಗತಿಗೆ ನಾವೆಲ್ಲರೂ ಕೈಜೋಡಿಸಬೇಕು. ಪ್ರತಿಭಾನ್ವಿತ ಮಕ್ಕಳಿಗೆ ಪ್ರೋತ್ಸಾಹ ಅಗತ್ಯ ಎಂದರು.

ಕ್ಲಬ್ ಕಾರ್ಯದರ್ಶಿ ಸಂತೋಷ ಅಕ್ಕಿ ಸ್ವಾಗತಿಸಿದರು. ಅಸಿಸ್ಟೆಂಟ್ ಗವರ್ನರ್ ಶಿವಾಚಾರ್ಯ ಹೊಸಳ್ಳಿಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಅಕ್ಷಯ ಶೆಟ್ಟಿ ವಂದಿಸಿದರು.

---

# ಅನಧಿಕೃತ ಕೊಳವೆಬಾವಿ ಮುಚ್ಚಿಸಲು ಮನವಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಹಿರೇಮಲ್ಲಾಪೂರ ಗ್ರಾಮದ ರಿ.ಸ.ನಂ. 45 ಮತ್ತು 46ರಲ್ಲಿ ಬೆಂಗಳೂರಿನ ಅಲ್ಪಿನೆ ಈಥನೋಲ್ ಪ್ರೈವೇಟ್ ಇವರು ಪರವಾನಿಗೆ ಇಲ್ಲದೇ ಬೋರವೆಲ್‌ಗಳನ್ನು ಹಾಕಿದ್ದು, ಇವುಗಳನ್ನು ಕೂಡಲೇ ಬಂದ್ ಮಾಡಬೇಕೆಂದು ಜಯ ಕರ್ನಾಟಕ ಸಂಘಟನೆಯಿಂದ ಬುಧವಾರ ತಹಸೀಲ್ದಾರರಿಗೆ ಮನವಿ ಅರ್ಪಿಸಲಾಯಿತು.

ಈ ಸಂದರ್ಭದಲ್ಲಿ ಸಂಘಟನೆಯ ತಾಲೂಕಾಧ್ಯಕ್ಷ ರಮೇಶ ಹಂಗನಕಟ್ಟಿ ಮಾತನಾಡಿ, ಈ ಸ್ಥಳದಲ್ಲಿ ಒಟ್ಟು 13 ಬೋರ್‌ವೆಲ್‌ಗಳನ್ನು ಹಾಕಿದ್ದು, ಸುತ್ತಮುತ್ತಲಿನ ರೈತರ ಜಮೀನುಗಳಲ್ಲಿ ಅಂತರ್ಜಲ ಕುಸಿದು ತೊಂದರೆಯಾಲಿದೆ. ಕೂಡಲೇ ಬೋರ್‌ವೆಲ್‌ಗಳನ್ನು ಸಂಪೂರ್ಣವಾಗಿ ಮುಚ್ಚಿಸಿ, ಇಲ್ಲಿನ ರೈತರಿಗೆ ಅನುಕೂಲ ಮಾಡಿಕೊಡಬೇಕು ಎಂದರು.

ತಹಸೀಲ್ದಾರ ವಾಸುದೇವ ಸ್ವಾಮಿ ಮನವಿ ಸ್ವೀಕರಿಸಿದರು. ಉಪಾಧ್ಯಕ್ಷ ರುದ್ರಗೌಡ ಪಾಟೀಲ್, ಇಶಾಕಭಾಷಾ ಹರಪನಹಳ್ಳಿ, ವಿ.ಎಸ್. ಮಠಪತಿ, ಸಚಿನ ಮೇಲ್ಮುರಿ, ಸಂತೋಷ ಬಡಕಲ್, ಭೀಮಪ್ಪ ಪೂಜಾರ, ಕುಮಾರ ಕಡಕೋಳ, ನಾಗರಾಜ ಉಪ್ಪಾರ, ಹನುಮಂತಪ್ಪ ಬಂಡಾರಿ, ಹಾಲಪ್ಪ ಬಂಡಾರಿ, ಬಸವರಾಜ ಮೇಲ್ಮುರಿ, ಪ್ರದೀಪ ಬಳಿಗಾರ, ಶಿವರಾಜ ಕೋತಬಾಳ, ಮಾಂತೇಶ ಬಂಡಾರಿ, ಆನಂದ ಕಡಕೋಳ, ರಾಜು ಕೇರೆಕೊಪ್ಪದ, ಪುಟ್ಟಪ್ಪ ಹರಿಜನ, ರುದ್ರಪ್ಪ ಬೂದಿಹಾಳ, ಹೊನ್ನಪ್ಪ ಹುರಕನವರ, ಆಂಜನೇಯು ಕಳಸಾಪುರ ಮುಂತಾದವರಿದ್ದರು.

---

# ಪಂ.ದೀನದಯಾಳರ ಆದರ್ಶಗಳು ಸಾರ್ವಕಾಲಿಕ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾರತದ ಅಖಂಡತೆ, ಅಭ್ಯುದಯಕ್ಕಾಗಿ ತಮ್ಮನ್ನೇ ಸಮರ್ಪಿಸಿಕೊಂಡ ಭಾರತ ಮಾತೆಯ ಸುಪುತ್ರ ಪಂಡಿತ ದೀನದಯಾಳ ಉಪಾಧ್ಯಾಯರ ಚಿಂತನೆ, ಆದರ್ಶ, ಮೌಲ್ಯಗಳು ಸಾರ್ವಕಾಲಿಕ ಸತ್ಯಗಳಾಗಿವೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಬುಧವಾರ ಪಟ್ಟಣದಲ್ಲಿ ಬಿಜೆಪಿ ಮಂಡಳ ಮತ್ತು ನಗರ ಘಟಕದಿಂದ ಆಚರಿಸಲಾದ ಪಂ.ದೀನದಯಾಳ ಉಪಾದ್ಯಯರ ಜನ್ಮ ದಿನಾಚರಣೆ ವೇಳೆ ಅವರ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಮಾತನಾಡಿದರು. ಉಪಾಧ್ಯಾಯರ ಕನಸಿನಂತೆ ಇಂದು ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ದೇಶದ ಸರ್ವತೋಮುಖ ಪ್ರಗತಿಗಾಗಿ ಶ್ರಮಿಸುತ್ತಿದೆ. ಪ್ರತಿಯೊಬ್ಬ ಭಾರತೀಯನೂ ಸ್ವಾಭಿಮಾನಿ ಜೀವನ ಸಾಗಿಸುವಂತಾಗಬೇಕು.



ಸದೃಢ ಸಶಕ್ತ ರಾಷ್ಟ್ರ ನಿರ್ಮಾಣವಾಗಬೇಕು ಎಂಬುದು ಉಪಾಧ್ಯಾಯರ ಕನಸಾಗಿತ್ತು. ಅವರ ಅದ್ಭುತವಾದ ಚಿಂತನೆ, ವಿಚಾರಧಾರೆಗಳೊಂದಿಗೆ ಯುವಕರು ದೇಶ ಕಟ್ಟುವ ಕಾರ್ಯಕ್ಕೆ ಕೈ ಜೋಡಿಸಬೇಕು ಎಂದರು.

ಮಂಡಳದ ಅಧ್ಯಕ್ಷ ಸುನಿಲ್ ಮಹಾಂತಶೆಟ್ಟರ್, ನಗರ ಘಟಕದ ಅಧ್ಯಕ್ಷ ನವೀನ ಬೆಳ್ಳಟ್ಟಿ, ಶಿವಯೋಗಿ ಅಂಕಲಕೋಟಿ ಮುಂತಾದವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಕಲ್ಲಪ್ಪ ಹಡಪದ, ಅನಿಲ ಮುಳಗುಂದ, ಗಿರೀಶ ಚೌರಡ್ಡಿ, ರುದ್ರಪ್ಪ ಉಮಚಗಿ, ವಿಜಯ ಮೆಕ್ಕಿ, ಮಹಾದೇವಪ್ಪ ಅಣ್ಣಿಗೇರಿ, ವಿಜಯ ಬೂದಿಹಾಳ, ನೀಲಪ್ಪ ಹತ್ತಿ, ಅಜ್ಜಪ್ಪ ಹೂಗಾರ, ಮಂಜುನಾಥ ಗಜಾಕೋಶ, ಸಂತೋಷ ಜಾವೂರ ಸೇರಿದಂತೆ ಅನೇಕರಿದ್ದರು.

---

# ಧರ್ಮ ಜಾಗೃತಿಗಾಗಿ ಗಣೇಶೋತ್ಸವ ಆಚರಣೆಯಾಗಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಅಂದು ಸ್ವಾತಂತ್ರ್ಯೋತ್ಸವಕ್ಕಾಗಿ ಜನರನ್ನು ಸಂಘಟನೆ ಮಾಡುವ ಉದ್ದೇಶದಿಂದ ಬಾಲಗಂಗಾಧರ ಟಿಳಕರವರು ಸಾರ್ವಜನಿಕ ಗಣೇಶೋತ್ಸವವನ್ನು ಆಚರಿಸಲು ಪ್ರಾರಂಭಿಸಿದರು. ಇಂದು ಧರ್ಮ ಜಾಗೃತಿಗಾಗಿ ಗಣೇಶೋತ್ಸವವನ್ನು ಆಚರಿಸುವ ಸಂಪ್ರದಾಯ ಬೆಳೆದು ಬರಬೇಕಾಗಿದೆ ಎಂದು ಗದಗ ಜಿಲ್ಲಾ ಸಾರ್ವಜನಿಕ ಗಜಾನೋತ್ಸವ ಮಹಾಮಂಡಳಿ ಅಧ್ಯಕ್ಷ ರಾಜಣ್ಣ ಮಲ್ಲಾಡದ, ಶ್ರೀರಾಮಸೇನಾ ರಾಜ್ಯ ಕಾರ್ಯದರ್ಶಿ ರಾಜು ಖಾನಪ್ಪನವರ ಅಭಿಪ್ರಾಯಪಟ್ಟರು.



ಅವರು ಪಟ್ಟಣದ ಹಾವಳಿ ಆಂಜನೇಯ ದೇವಸ್ಥಾನ ಎದುರಗಡೆ ನಡೆದ ಕಾರ್ಯಕ್ರಮದಲ್ಲಿ ತಾಲೂಕಾ ಸಾರ್ವಜನಿಕ ಗಜಾನನೋತ್ಸವ ಮಹಾಮಂಡಳಿ ವತಿಯಿಂದ ಸುಂದರವಾದ ಗಣೇಶ ಮೂರ್ತಿಗಳಿಗೆ ಬಹುಮಾನ ವಿತರಣೆ ಮಾಡಿ ಮಾತನಾಡಿದರು.

ಲೋಕಮಾನ್ಯ ಬಾಲಗಂಗಾಧರ ತಿಲಕರು ಜನರಲ್ಲಿ ಸ್ವಾತಂತ್ರ್ಯದ ಕಿಚ್ಚನ್ನು ಹೊರಗೆಡವುದರ ಸಲುವಾಗಿ ಇದನ್ನು ಸಾಧನವಾಗಿ ಬಳಸಿಕೊಂಡರು. ಸಾರ್ವಜನಿಕ ಗಣೇಶ ಚತುರ್ಥಿ ಅಂದರೆ ಡಿಜೆಗೆ ಅಷ್ಟೇ ಸೀಮಿತವಾಗಿರಬಾರದು. 131 ವರ್ಷದ ಹಿಂದೆ ಮನೆಗಳಿಗಷ್ಟೇ ಸೀಮಿತವಾಗಿದ್ದ ಗಣೇಶ ಹಬ್ಬ ಸಾರ್ವಜನಿಕವಾಗಿ ಎಲ್ಲಾ ಹಿಂದೂಗಳು ಜಾತಿ ಬೇಧ ಮರೆತು ಎಲ್ಲರೂ ಕೂಡಿಕೊಂಡು ಆಚರಣೆ ಮಾಡುವ ಉದ್ದೇಶ ಹೊಂದಿದೆ. ಗಣೇಶ ಹಬ್ಬದಲ್ಲಿ ನಮ್ಮ ಸಂಸ್ಕೃತಿ-ಪರಂಪರೆ ಉಳಿಸುವ ಕಾರ್ಯವನ್ನು ಯುವಕರು ಮಾಡಲಿ. ದಿನನಿತ್ಯ ಪೂಜೆ ಸಲ್ಲಿಸುವಾಗ ಹೆಚ್ಚಿನ ಸಂಖ್ಯೆಯಲ್ಲಿ ಕೂಡಿಕೊಂಡು ಗಣೇಶ ನಾಮ ಸ್ಮರಣೆ ಮಾಡುವ ಮೂಲಕ ಧರ್ಮ ಜಾಗೃತಿ ಮಾಡಬೇಕು ಎಂದು ಕರೆ ನೀಡಿದರು.

ಕೆಂಚಲಾಪುರ ಓಣಿಯ ಗಜಾನನ ಯುವಕ ಮಂಡಳಿ ಪ್ರಥಮ, ಪಿಎಸ್‌ಬಿಡಿ ಶಾಲೆ ಹತ್ತಿರ ಇರುವ ಈಶ್ವರ ಯುವಕ ಮಂಡಳಿ ದ್ವಿತೀಯ, ಹಳ್ಳದಕೇರಿ ಓಣಿಯ ಮಾರುತಿ ಯುವಕ ಮಂಡಳ ತೃತೀಯ ಬಹುಮಾನ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಸಾರ್ವಜನಿಕ ಗಜಾನನೋತ್ಸವ ಮಂಡಳಿ ಸಂಚಾಲಕ ಈರಣ್ಣ ಪ್ರಜಾರ, ಹಿಂದೂ ಮಹಾ ಸಭಾ ಗಣಪತಿ ಸಂಘದ ಅಧ್ಯಕ್ಷ ಫಕ್ಕೀರೇಶ ಅಣ್ಣಿಗೇರಿ, ಮಹೇಶ ಕಲಘಟಗಿ, ಮಹೇಶ ಮೇಟಿ, ಬಸವರಾಜ ಚಕ್ರಸಾಲಿ ಸೇರಿದಂತೆ ಅನೇಕ ಹಿಂದೂಪರ ಸಂಘಟನೆ ಕಾರ್ಯಕರ್ತರು, ಪಟ್ಟಣದ ಗಣೇಶ ಯುವಕ ಮಂಡಳಿ ಸದಸ್ಯರು ಇದ್ದರು.

---

**ತೋಂಟದ ಸಿದ್ಧೇಶ್ವರ ಪ.ಪೂ ಕಾಲೇಜಿನಲ್ಲಿ ಕರ್ನಾಟಕ ಏಕೀಕರಣ ಯಶೋಗಾಥೆಯ ಉಪನ್ಯಾಸ**

# ಸರ್ ಸಿದ್ಧಪ್ಪ ಕಂಬಳಿ ಶೈಕ್ಷಣಿಕ ಮೇರುಪರ್ವತ

■ವಿಜಯಸಾಕ್ಷಿ ಸುದ್ದಿ, ಗದಗ

ಬಡತನದ ಹಿನ್ನೆಲೆಯಿಂದ ಬಂದು ಇಡೀ ದೇಶವೇ ಮೆಚ್ಚುವಂತೆ ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿಯನ್ನು ತಂದ ಸರ್ ಸಿದ್ಧಪ್ಪ ಕಂಬಳಿಯವರು ಶಿಕ್ಷಣ ಕ್ಷೇತ್ರದ ಮೇರುಪರ್ವತ ಎಂದು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಕೇಂದ್ರದ ಉಪನ್ಯಾಸಕರು ಹಾಗೂ ಅಕ್ಷರ ದಾಸೋಹ ಅಧಿಕಾರಿಗಳಾದ ಶಂಕರ ಹಡಗಲಿ ನುಡಿದರು.

ಅವರು ಇತ್ತೀಚೆಗೆ ನಗರದ ತೋಂಟದ ಸಿದ್ಧೇಶ್ವರ ಪ.ಪೂ ಕಾಲೇಜಿನಲ್ಲಿ ಜರುಗಿದ ಕರ್ನಾಟಕ ಏಕೀಕರಣ ಯಶೋಗಾಥೆ ಸರಣಿ ಕಾರ್ಯಕ್ರಮದಲ್ಲಿ ಸರ್ ಸಿದ್ಧಪ್ಪ ಕಂಬಳಿಯವರ ಕುರಿತು ಉಪನ್ಯಾಸ ನೀಡುತ್ತಿದ್ದರು.




ಶಿಕ್ಷಣ ಸಚಿವರಾದ ನಂತರ ಅವರ ಕಾರ್ಯವೈಖರಿ, ಅಧ್ಯಯನಶೀಲತೆ ಮತ್ತು ಸಮರ್ಪಣಾ ಶೈಲಿಯನ್ನು ಕಂಡು ಬ್ರಿಟಿಷರು ವಿಸ್ಮಯಗೊಂಡರು. ಬ್ರಿಟಿಷ್ ಸರ್ಕಾರ ಖರ್ಚು ಉಳಿಸಲು ಧಾರವಾಡದ ಕರ್ನಾಟಕ ಕಾಲೇಜನ್ನು ಮುಚ್ಚಲು ಸರ್ಕಾರ ಮುಂದಾಗಿತ್ತು. ಆದರೆ ಕಾಲೇಜು ಮುಚ್ಚಿದರೆ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಸಿದ್ಧಪ್ಪನವರು ಕಠಿಣ ನಿಲುವು ತಳೆದರು. ಕರ್ನಾಟಕ ಏಕೀಕರಣದ ಕನಸನ್ನು ಕಂಡಿದ್ದ ಕಂಬಳಿಯವರು ಕರ್ನಾಟಕ ಏಕೀಕರಣದಲ್ಲಿ ಬಹುಮುಖ್ಯ ಪಾತ್ರವನ್ನು ವಹಿಸಿದ್ದಾರೆ ಎಂದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟರ ಮಾತನಾಡಿ, ಗದುಗಿನಲ್ಲಿ ತೋಂಟದಾರ್ಯ ವಿದ್ಯಾಪೀಠದಿಂದ ನಡೆಯುತ್ತಿರುವ ಕೈಗಾರಿಕಾ ತರಬೇತಿ ಕೇಂದ್ರಕ್ಕೆ ಸರ್ ಸಿದ್ಧಪ್ಪ ಕಂಬಳಿಯವರ ಹೆಸರು ನಾಮಕರಣ ಮಾಡಿದ್ದ ಪೂಜ್ಯರು ಹುಬ್ಬಳ್ಳಿಯಲ್ಲಿ ಸರ್ ಸಿದ್ಧಪ್ಪ ಕಂಬಳಿಯವರ ಮೂರ್ತಿ ಪ್ರತಿಷ್ಠಾಪನೆಗೂ ಪ್ರೇರಣೆ ನೀಡಿದ್ದನ್ನು ಸ್ಮರಿಸಿದರು.

ಸಾನ್ನಿಧ್ಯ ವಹಿಸಿದ್ದ ಭೈರನಹಟ್ಟಿ ದೊರೆಸ್ವಾಮಿ ವಿರಕ್ತಮಠದ ಪೂಜ್ಯ ಶಾಂತಲಿಂಗ ಮಹಾಸ್ವಾಮಿಗಳು ಹಾಗೂ ಅತಿಥಿಗಳು ಕಾರ್ಯಕ್ರಮದ ಆರಂಭಕ್ಕೂ ಮುನ್ನ ಕರ್ನಾಟಕ ಸುವರ್ಣ ಸಂಭ್ರಮದ ಸವಿನೆನಪಿಗಾಗಿ ನಗರದ ಭೂಮರಡ್ಡಿ ವೃತ್ತದ ಹತ್ತಿರ ಸ್ಥಾಪಿತವಾದ ಶಿಲಾಸ್ತಂಭಕ್ಕೆ ಮಾಲಾರ್ಪಣೆ ಮಾಡಿದರು. ಡಾ. ಜಿ.ಬಿ ಪಾಟೀಲ ಅವರು ಕನ್ನಡ ಭಾಷೆಯ ಮಹತ್ವದ ಕುರಿತು ಮಾತನಾಡಿದರು. ನಯನಾ ಅಳವಂಡಿ ಭಾವಗೀತೆ ಹಾಡಿದಳು.

ತೋಂಟದಾರ್ಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕೊಟ್ರೇಶ ಮೆಣಸಿನಕಾಯಿ ಸ್ವಾಗತಿಸಿದರು. ವೇದಿಕೆ ಮೇಲೆ ಸದಸ್ಯರಾದ ಅಮರೇಶ ಅಂಗಡಿ, ಕನ್ನಡ ಮತ್ತು ಸಂಸ್ಕೃತಿ ವೇದಿಕೆ ಭೈರನಹಟ್ಟಿಯ ಕಾರ್ಯದರ್ಶಿ ರಮೇಶ ರಾಮೇನಹಳ್ಳಿ ಉಪಸ್ಥಿತರಿದ್ದರು. ತೋಂಟದ ಸಿದ್ಧೇಶ್ವರ ಕಾಲೇಜಿನ ಪ್ರಾಚಾರ್ಯರಾದ ವೈ. ಎಸ್. ಮತ್ತೂರ ನಿರೂಪಿಸಿದರು.

ಜನ ಜಾಗೃತಿ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಬೆವರಿನ ಹನಿ ಬದುಕಿನ ದಾರಿ ತೋರಿಸುತ್ತದೆ

■ವಿಜಯಸಾಕ್ಷಿ ಸುದ್ದಿ, ಕಡೂರು

ಮನುಷ್ಯ ಯಾವಾಗಲೂ ಸುಖಾಪೇಕ್ಷಿ. ಸುಖದ ಮೂಲ ಧರ್ಮಾಚರಣೆಯಲ್ಲಿದೆ. ಕಣ್ಣೀರಿನ ಹನಿ ಜೀವನದಲ್ಲಿ ಹೇಗಿರಬೇಕೆಂದು ಕಲಿಸಿದರೆ, ಧರ್ಮಾಚರಣೆ ಬದುಕಿನ ದಾರಿ ತೋರಿಸುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ತಾಲೂಕಿನ ಆಸಂದಿ ಗ್ರಾಮದಲ್ಲಿ ನಿರ್ಮಾಣ ಮಾಡಲು ಉದ್ದೇಶಿಸಿರುವ ಶ್ರೀ ಜಗದ್ಗುರು ರೇವಣಸಿದ್ಧೇಶ್ವರ ಮಠದ ಸಭಾಂಗಣದಲ್ಲಿ ಜರುಗಿದ ಇಷ್ಟಲಿಂಗ ಮಹಾಪೂಜಾ ಹಾಗೂ ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಹಾಲು ಸ್ವಚ್ಛವಾಗಿದ್ದು, ಪಾತ್ರೆ ಸ್ವಚ್ಛ ಇರದಿದ್ದರೆ ಹಾಲು ಕೆಟ್ಟು ಹೋಗುತ್ತದೆ. ಮಾತು ಸ್ವಚ್ಛವಾಗಿದ್ದು ಮನಸ್ಸು ಸ್ವಚ್ಛ ಇರದಿದ್ದರೆ ಮಾತಿಗೆ ಬೆಲೆ ಇರುವುದಿಲ್ಲ. ಕಷ್ಟದಲ್ಲಿ ಜೊತೆಗಿದ್ದವರನ್ನು ಸುಖ ಬಂದಾಗ ಮರೆಯಬಾರದು. ಬಂಗಾರವನ್ನು ಎಷ್ಟು ಚೂರು ಮಾಡಿದರೂ ಅದರ ಬೆಲೆ ಕಡಿಮೆಯಾಗುವುದಿಲ್ಲ. ಅದೇ ರೀತಿ ಒಳ್ಳೆತನದಿಂದ ಸಂಪಾದಿಸಿದ ಗೌರವ ಎಂದಿಗೂ ಮಾಸಿ ಹೋಗುವುದಿಲ್ಲ. ಶ್ರೀ ಜಗದ್ಗುರು ರೇವಣಸಿದ್ಧೇಶ್ವರರು ರಂಭಾಪುರಿ ಪೀಠದ ಪರಮಾಚಾರ್ಯರು. ನೊಂದವರ, ಬೆಂದವರ ಧ್ವನಿಯಾಗಿ ಜನ ಸಮುದಾಯದಲ್ಲಿ ಸಂಸ್ಕಾರ ಪ್ರಜ್ಞೆಯನ್ನು ಬೋಧಿಸಿದ ಮಹಾಪುರುಷರು.



ಹಾಲು ಮತ ಸಮಾಜ ಬಾಂಧವರಿಗೆ ದಿಕ್ಸೂಚಿಯಾಗಿ ಭಕ್ತಿಯ ಶಕ್ತಿಯನ್ನು ತುಂಬಿದವರು. ಶ್ರೀ ಜಗದ್ಗುರು ರೇವಣಸಿದ್ಧೇಶ್ವರರಿಗೂ ಶ್ರೀ ಬೀರಲಿಂಗೇಶ್ವರ ಸ್ವಾಮಿಗೂ ಇರುವ ಸಂಬಂಧವನ್ನು ಎಷ್ಟು ಕೊಂಡಾಡಿದರೂ ಸಾಲದು. ಆಸಂದಿ ಶ್ರೀ ಗುರು ರೇವಣಸಿದ್ಧೇಶ್ವರ ಮಠದ ಮತ್ತು ಬೇಗೂರು ಬೀರಲಿಂಗೇಶ್ವರಸ್ವಾಮಿ ಗುಡಕಟ್ಟಿನ ಗೌಡರು ದೊಡ್ಡಿಗೌಡರು ಹಾಗೂ ಉಭಯ ಕಾರ್ಯಕಾರಿ ವಿಶ್ವಸ್ಥ ಮಂಡಳಿಯವರು ಇಷ್ಟಲಿಂಗ ಮಹಾಪೂಜಾ ಮತ್ತು ಧರ್ಮ ಜಾಗೃತಿ ಸಮಾರಂಭ ಸಂಘಟಿಸಿರುವುದು ಜಗದ್ಗುರುಗಳಿಗೆ ಅತ್ಯಂತ ಸಂತೋಷವನ್ನು ತಂದಿದೆ. ಈ ಮಹತ್ಕಾರ್ಯ ಸಾಧನೆಗಾಗಿ ಶ್ರಮಿಸುತ್ತಿರುವ ಎಲ್ಲಾ ಹಾಲು ಮತ ಬಾಂಧವರಿಗೆ ಶುಭವಾಗಲೆಂದು ಹಾರೈಸಿದರು.

ಬೀರೂರು ಶ್ರೀ ರಂಭಾಪುರಿ ಖಾಸಾ ಶಾಖಾ ಮಠದ ರುದ್ರಮುನಿ ಶಿವಾಚಾರ್ಯರು ನೇತೃತ್ವ ವಹಿಸಿ ಮಾತನಾಡಿದರು. ಹುಣಸಘಟ್ಟ ಹಾಲುಸ್ವಾಮಿ ಮಠದ ಗುರುಮೂರ್ತಿ ಶಿವಾಚಾರ್ಯರು, ಕೆ.ಬಿದರೆ ದೊಡ್ಡಮಠದ ಪ್ರಭುಕುಮಾರ ಶಿವಾಚಾರ್ಯರು, ಬಿಳಕಿ ಹಿರೇಮಠದ ರಾಚೋಟೇಶ್ವರ ಶಿವಾಚಾರ್ಯರು, ಹಣ್ಣೆ ಮಠದ ಮರುಳಸಿದ್ಧ ಪಂಡಿತಾರಾಧ್ಯ ಶಿವಾಚಾರ್ಯರು, ಒಡೆಯರ್ ವಂಶಸ್ಥರು ಮತ್ತು ಮಠದ ಮನೆಯ ಶ್ರೀಗಳು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ಶ್ರೀ ಗುರು ರೇವಣಸಿದ್ಧೇಶ್ವರ ಮಠದ ವಿಶ್ವಸ್ಥ ಮಂಡಳಿ ಅಧ್ಯಕ್ಷ ರೇವಣಪ್ಪನವರು, ಕಾರ್ಯದರ್ಶಿ ಶಾಂತಪ್ಪನವರು, ಕಡೂರು ಪುರಸಭಾಧ್ಯಕ್ಷ ಭಂಡಾರಿ ಶ್ರೀನಿವಾಸ, ಅ.ಭಾ,ವೀ.ಮಹಾಸಭಾ ಚಿಕ್ಕಮಗಳೂರು ಜಿಲ್ಲಾ ಘಟಕದ ಅಧ್ಯಕ್ಷ ಹೆಚ್.ಎಂ. ಲೋಕೇಶ್ ಮಾತನಾಡಿದರು. ಉಪನ್ಯಾಸಕ ಆಸಂದಿ ಕುಮಾರ ನಿರೂಪಿಸಿದರು.

> ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಜೀವನದಲ್ಲಿ ಕಷ್ಟಗಳು ಬಂದಾಗ ಯಾರ ಹತ್ತಿರ ಸಲಹೆಯನ್ನು ಕೇಳಬೇಕೆಂಬುದು ಮುಖ್ಯ. ಯಾಕೆಂದರೆ ದುರ್ಯೋಧನ ಶಕುನಿ ಹತ್ತಿರ ಸಲಹೆ ಕೇಳುತ್ತಿದ್ದ. ಆದರೆ ಅರ್ಜುನ ಶ್ರೀ ಕೃಷ್ಣನ ಬಳಿ ಸಲಹೆ ಕೇಳುತ್ತಿದ್ದ ಎಂಬುದನ್ನು ಮನುಷ್ಯ ಅರಿಯಬೇಕು. ಶ್ರೀ ರಂಭಾಪುರಿ ಪೀಠದ ಜಗದ್ಗುರುಗಳ ಆಶೀರ್ವಾದದಿಂದ ನಿಂತು ಹೋದ ದೇವಸ್ಥಾನ ಕಾರ್ಯ ಯಶಸ್ವಿಯಾಗಿ ಪೂರ್ಣಗೊಳ್ಳಲೆಂದು ಆಶಿಸಿದರು.

# ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಸೆಪ್ಟೆಂಬರ್ 27 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 22 ದೊಡ್ಡ ಮಸೂತಿ ಭಾಗ 2,000 1,600 1,400. 1,800 ಮನೆಗಳು, ಮಸೂತಿಯ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 16, 18, 19 ಮಡಿವಾಳ ದೇವರ ಗುಡಿ, ಕುಂಬಾರ ಓಣಿ ಭಾಗ-1,2 , ಬಾಗಲಕೋಟಿ ಲೈನ್, ಹನುಮಂತ ದೇವರ ಗುಡಿ, ಕೋನೆರಿ ಹೊಂಡ ಹೊಸ ಲೈನ್, ಡೋರಗಲ್ಲಿ ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 35 ಆಂಜನೇಯ ಗುಡಿ, ಪತ್ತಾರ ಸರ್ ಲೈನ್, ಬಿದರೂರ ಸರ್ ಲೈನ್, ಆದರ್ಶ ನಗರ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 23 ಲಕ್ಕುಂಡಿ, ಮಾನ್ವಿ, ಅಕ್ಕಿ, ಬಾಳೆಕಾಯಿಯವರ ಲೈನ್‌ಗಳು, ಗಣಪತಿ ಗುಡಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 28 ಪಂಚಾಕ್ಷರಿ ನಗರ 5ನೇ ಕ್ರಾಸ್. ವಾರ್ಡ್ ನಂ. 26 ಕಲಾಮಂದಿರ ರೋಡ, ಅಕ್ಕನ ಬಳಗ, ಮೂರು ಶಿಳ್ಳಿನ ವಕಾರ, ದನದ ದವಾಖಾನೆ ಲೈನ್, ಉರ್ದು ಶಾಲೆಯ ಹಿಂದಿನ ಭಾಗ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 8, 10, 9 ಶಿರಹಟ್ಟಿ ಓಣಿ, ಬ್ರೆಡ್ ನವರ ಲೈನ್, ಕಬಾಡೆ ರಸ್ತೆ, ಬೋರೇಗಾರ ಓಣಿ, ಮಜ್ಜಿಗಿ ಓಣಿ, ತೆಗ್ಗಿನ ಪೇಟೆ, ಗಣೇಶ ಗುಡಿ ಲೈನ್, ಕುರಹಟ್ಟಿ ಪೇಟೆ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಂಥ ದಾನ ಮಹಾ ದಾನ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ದಾನಗಳಲ್ಲಿ ಅನ್ನದಾನ, ವಿದ್ಯಾದಾನ ಹೇಗೆ ಮಹತ್ವವೋ, ಹಾಗೆಯೆ ಶೈಕ್ಷಣಿಕ ಸಂಸ್ಥೆಗಳಿಗೆ ಗ್ರಂಥ ದಾನವೂ ಮುಖ್ಯವಾಗಿದೆ. ಇದರಿಂದ ಶೈಕ್ಷಣಿಕ ಸಂಸ್ಥೆಗಳಲ್ಲಿ ಕಲಿಯುವ ವಿದ್ಯಾರ್ಥಿಗಳ ಜ್ಞಾನವನ್ನು ಹೆಚ್ಚಿಸಲು ಸಹಾಯಕವಾಗುತ್ತದೆ. ಇಂತಹ ಮಹತ್ತರ ದಾನವನ್ನು ಇಂದು ನಮ್ಮ ಶ್ರೀ ಅನ್ನದಾನೇಶ್ವರ ಪ.ಪೂ ಮಹಾವಿದ್ಯಾಲಯಕ್ಕೆ ನೀಡಿರುವ ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿಯವರ ಕಾರ್ಯ ಶ್ಲಾಘನೀಯ ಎಂದು ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯ ಆಡಳಿತಾಧಿಕಾರಿ ಎನ್.ಆರ್. ಗೌಡರ ಹೇಳಿದರು.

ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿಯವರು ನೀಡಿದ ಗ್ರಂಥ ದಾನವನ್ನು ಸ್ವೀಕರಿಸಿದ ನಂತರ ಗೌಡರ ಮಾತನಾಡಿದರು.

ಇಂದು ಸ್ವೀಕೃತಗೊಂಡ ಎಲ್ಲ ಗ್ರಂಥಗಳೂ ನಮ್ಮ ಕಾಲೇಜಿನ ಗ್ರಂಥಾಲಯದಲ್ಲಿ ಇರುತ್ತವೆ. ವಿದ್ಯಾರ್ಥಿಗಳು ತಮ್ಮ ಬಿಡುವಿನ ವೇಳೆಯಲ್ಲಿ ಅವುಗಳನ್ನು ಓದಿ ತಮ್ಮ ಜ್ಞಾನವನ್ನು ಹೆಚ್ಚಿಸಿಕೊಳ್ಳಬೇಕೆಂದು ತಿಳಿಸಿದರು.

ಕಾಲೇಜಿನ ಪ್ರಾಚಾರ್ಯ ವೈ.ಸಿ. ಪಾಟೀಲ ಮಾತನಾಡಿ, ಇಂತಹ ಮಹತ್ವದ ಗ್ರಂಥಗಳನ್ನು ನಮ್ಮ ಕಾಲೇಜಿಗೆ ದಾನ ನೀಡಿದ ಕುಲಕರ್ಣಿಯವರನ್ನು ನಾನು ಅಭಿನಂದಿಸುತ್ತೇನೆ. ಇವುಗಳನ್ನು ನಾನು ಅತ್ಯಂತ ಸಂತೋಷದಿಂದ ಸ್ವೀಕರಿಸಿದ್ದು, ಅನೇಕ ಉಪಯುಕ್ತ ಗ್ರಂಥಗಳು ಇದರಲ್ಲಿವೆ. ಇವುಗಳ ಪ್ರಯೋಜನವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕೆಂದರು.

ಗ್ರಂಥ ದಾನಿ ಕುಲಕರ್ಣಿ ಮಾತನಾಡಿ, ಈ ಗ್ರಂಥಗಳಲ್ಲಿ ನನ್ನ ವೈಯಕ್ತಿಕ ಗ್ರಂಥಗಳೂ ಸೇರಿದಂತೆ ವಿಭೂತಿ ಮಾಸಪತ್ರಿಕೆ ಸಂಪಾದಕ ಅಂದಾನೆಪ್ಪ ವಿಭೂತಿಯವರು ನೀಡಿದ ಗ್ರಂಥಗಳು ಇದರಲ್ಲಿವೆ. ಇವೆಲ್ಲವೂ ಅತ್ಯಂತ ಮೌಲಿಕ ಕೃತಿಗಳಾಗಿದ್ದು, ಅವುಗಳನ್ನೆಲ್ಲ ಓದಿ ನೀವು ನಿಮ್ಮ ಜ್ಞಾನದ ಮಟ್ಟವನ್ನು ಹೆಚ್ಚಿಸಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ನಿವೃತ್ತ ಪ್ರಾಚಾರ್ಯ ಸಿ.ಐ. ಮರಡಿಮಠ, ಉಚಿತ ಪ್ರಸಾದ ನಿಲಯದ ಚೇರಮನ್ ಮಲ್ಲಿಕಾರ್ಜುನಪ್ಪ ಮೆಣಸಿಗಿ, ಕಾಲೇಜಿನ ಸಿಬ್ಬಂದಿಯವರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಿಗೆ ಪರೀಕ್ಷಾ ಪ್ಯಾಡ್ ವಿತರಣೆ




■ವಿಜಯಸಾಕ್ಷಿ ಸುದ್ದಿ, ಗದಗ

ಕವಾಡರ ಕುಟುಂಬದವರಾದ ಜಯಂತಿಲಾಲರವರು ತಮ್ಮ ಧರ್ಮಪತ್ನಿ ಹೇಮಾವತಿ ಜ.ಕವಾಡರ ಇವರ ಜನ್ಮದಿನದ ಪ್ರಯುಕ್ತ ನಗರದ ಸರ್ಕಾರಿ ಕಿರಿಯ ಪ್ರಾಥಮಿಕ ಉರ್ದು ಗಂಡು ಮಕ್ಕಳ ಶಾಲೆ ನಂ. 3ರಲ್ಲಿ ಮಕ್ಕಳಿಗೆ ಪರೀಕ್ಷಾ ಪ್ಯಾಡ್, ಪೆನ್ಸಿಲ್ ವಿತರಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ವತಿಯಿಂದ ಹೇಮಾವತಿ ಜಯಂತಿಲಾಲ ಕವಾಡರರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಜಯಂತಿಲಾಲ ಕವಾಡರ, ಹೇಮಾವತಿ ಜಯಂತಿಲಾಲ ಕವಾಡರ, ಶೈಲೇಶ, ಮಹೇಶ ಬಂಥಾ, ಗೌತಮ ಪಾರಲೇಶಾ, ಮೋಹಿತ ಕವಾಡ, ಅಕ್ಷತಾ ಎಂ.ಕವಾಡ, ಹೈಯಾನ್ಸ್ ಎಮ್. ಕವಾಡ, ಶ್ರೀಮತಿ ಕಮತರ, ಶ್ರೀಮತಿ ಹೂಗಾರ, ಶಾಲೆಯ ಪ್ರಧಾನ ಗುರು ಎ.ಎಸ್. ಮಸೂತಿ, ಸಹಶಿಕ್ಷಕಿ ಎ.ಎನ್. ಗೌಡರ ಮುಂತಾದವರಿದ್ದರು.

# ಅ.03 ರಿಂದ ಹುಲಿಗೆಮ್ಮ ದೇವಿ ದಸರಾ ಮಹೋತ್ಸವ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ



ತಾಲೂಕಿನ ಹುಲಗಿ ಗ್ರಾಮದ ಶಕ್ತಿ ಕೇಂದ್ರ ಹುಲಿಗೆಮ್ಮದೇವಿ ದೇವಸ್ಥಾನದಿಂದ 'ಶ್ರೀ ಹುಲಿಗೆಮ್ಮದೇವಿ ದಸರಾ ಮಹೋತ್ಸವ-2024' ಕಾರ್ಯಕ್ರಮ ಅ. 03 ರಿಂದ ಅ.12 ರವರೆಗೆ ಹಮ್ಮಿಕೊಳ್ಳಲಾಗಿದ್ದು, ಉದ್ಘಾಟನಾ ಸಮಾರಂಭವು ಅ. 03 ರ ಸ. 6.30 ಗಂಟೆಗೆ ನಡೆಯಲಿದೆ.

ಜಿಲ್ಲಾ ಉಸ್ತುವಾರಿ ಸಚಿವ ತಂಗಡ ಗಿ ಶಿವರಾಜ ತಂಗಡಗಿ ದಸರಾ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸುವರು, ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ, ವಿಧಾನಸಭೆ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಕುಷ್ಟಗಿ ಶಾಸಕ ದೊಡ್ಡನಗೌಡ ಪಾಟೀಲ,

ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ಶಾಸಕ ಬಸವರಾಜ ರಾಯರೆಡ್ಡಿ ಘನ ಉಪಸ್ಥಿತಿ ವಹಿಸುವರು. ಕೊಪ್ಪಳ ಶಾಸಕ ಕೆ.ರಾಘವೇಂದ್ರ ಹಿಟ್ನಾಳ ಅಧ್ಯಕ್ಷತೆ ವಹಿಸುವರು. ವಿಶೇಷ ಆಹ್ವಾನಿತರಾಗಿ ಕರ್ನಾಟಕ ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಕೊಟ್ರಯ್ಯ ಸ್ವಾಮಿ ಹಿರೇಮಠ ಹುಲಿಗಿ ಅವರು ಆಗಮಿಸುವರು.



ಮುಳಗುಂದ ಪಟ್ಟಣ ಸಮೀಪದ ಕಣವಿ ಗ್ರಾಮದ ಸರಕಾರಿ ಪ್ರಾಥಮಿಕ ಶಾಲೆಯ ಬಾಲಕಿಯರು ತಾಲೂಕು ಮಟ್ಟದ ಖೋಖೋ ಕ್ರೀಡೆಯಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದು, ಶಾಲಾ ಶಿಕ್ಷಕ ವೃಂದ ಹಾಗೂ ಎಸ್‌ಡಿಎಂಸಿ ಅಧ್ಯಕ್ಷರು, ಸರ್ವ ಸದಸ್ಯರು ಅಭಿನಂದಿಸಿದ್ದಾರೆ.

# ಪೌಷ್ಠಿಕ ಆಹಾರದಿಂದ ಬುದ್ಧಿಮಟ್ಟ ಹೆಚ್ಚಳ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಅಪೌಷ್ಠಿಕತೆ, ಸಮಾಜದ ಮೇಲೆ ಅದರ ಪ್ರಭಾವ ಮತ್ತು ಆರೋಗ್ಯಕರ ಮತ್ತು ಸಮತೋಲಿತ ಆಹಾರದ ಮೌಲ್ಯವನ್ನು ತಿಳಿಸಲು ವಿದ್ಯಾರ್ಥಿಗಳೊಂದಿಗೆ ಚಟುವಟಿಕೆಗಳನ್ನು ಆಯೋಜಿಸಲಾಗುತ್ತಿದೆ ಎಂದು ಸಿಆರ್‌ಪಿ ಸತೀಶ ಬೊಮಲೆ ಅಭಿಪ್ರಾಯಪಟ್ಟರು.

ಗುರುವಾರ ಪಟ್ಟಣದ ಸರ್ಕಾರಿ ಮಾದರಿ ಕನ್ನಡ ಹೆಣ್ಣು ಮಕ್ಕಳ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಪೋಷಣ ಅಭಿಯಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪೌಷ್ಠಿಕಾಂಶದ ಆಹಾರಗಳು ಮತ್ತು ಅವುಗಳ ಪ್ರಯೋಜನಗಳು, ಆಹಾರಗಳ ವೈಜ್ಞಾನಿಕ ಹೆಸರು, ದೈನಂದಿನ ಆಹಾರ ಮತ್ತು ಆರೋಗ್ಯಕರ ಜೀವನಶೈಲಿಯ ಬಗ್ಗೆ ಹೆಚ್ಚು ಸಕ್ರಿಯ ಜಾಗೃತಿಯನ್ನು ತರಲು ಗಮನಹರಿಸಲಾಗಿದ್ದು ಮಕ್ಕಳ ಆರೋಗ್ಯದ ಕಡೆಗಳ ಗಮನ ಕೊಡುವ ನಿಟ್ಟಿನಲ್ಲಿ ಉತ್ತಮ ಪೌಷ್ಠಿಕ ಆಹಾರ ದೊರೆಯುವಂತೆ ಮಾಡುವದಕ್ಕೆ ಪಾಲಕರ ಗಮನ ಹರಿಸಬೇಕು. ಪೌಷ್ಠಿಕ ಆಹಾರದಿಂದ ಮಕ್ಕಳಲ್ಲಿ ಬುದ್ಧಿಮಟ್ಟವು ಹೆಚ್ಚುವದರಲ್ಲಿ ಸಂಶಯವಿಲ್ಲ. ಈ ನಿಟ್ಟನಲ್ಲಿ ಶಾಲೆಗಳಲ್ಲಿ ಪ್ರಾರಂಭಿಸಲಾಗಿರುವ ಪೋಷಣ ಅಭಿಯಾನದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಮುಖ್ಯೋಪಾಧ್ಯಾಯ ಬಿ.ಎಂ. ಕುಂಬಾರ ಮಾತನಾಡಿ, ಮಕ್ಕಳು ಮತ್ತು ಸಮುದಾಯದ ಪೌಷ್ಠಿಕ ಆರೋಗ್ಯವನ್ನು ಸುಧಾರಿಸಲು, ಪೋಷಣ ಅಭಿಯಾನವನ್ನು 2018ರಲ್ಲಿ ಭಾರತದಾದ್ಯಂತ ಪ್ರಾರಂಭಿಸಲಾಯಿತು. ಅಪೌಷ್ಠಿಕತೆಯಿಂದ ಯಾರೂ ಬಳಲಬಾರದು ಎನ್ನುವದು ಈ ಯೋಜನೆಯ ಉದ್ದೇಶವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಲೆಯ ಸಹ ಶಿಕ್ಷಕರಾದ ಆರ್.ಎಮ್. ಶಿರಹಟ್ಟಿ, ಎಚ್.ಡಿ. ನಿಂಗರೆಡ್ಡಿ, ಸ್ವಪ್ನಾ ಕಾಳೆ, ಅಕ್ಷತಾ ಕಾಟಿಗರ, ಲಕ್ಷ್ಮೀ ಹತ್ತಿಕಟ್ಟಿ, ಆರ್.ಕೆ. ಉಪನಾಳ ಹಾಗೂ ಶಾಲೆಯ ಅಡುಗೆ ಸಿಬ್ಬಂದಿಯವರಾದ ರಜೀಯಾ ನಧಾಫ್, ಶಶಿಕಲಾ ರಾಯಭಾಗಿ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

ಪುರಸಭೆಯ ಸಾಮಾನ್ಯ ಸಭೆಯಲ್ಲಿ ಸದಸ್ಯರ ಆಕ್ರೋಶ

# ಇದೆಂಥಾ ಸ್ಥಿತಿ ನಮ್ಮೂರಿಗೆ!

■ವಿಜಯಸಾಕ್ಷಿ ಸುದ್ದಿ, ರೋಣ



ಕುಡಿಯಲು ನೀರು ಸಿಗುತ್ತಿಲ್ಲ, ಇದೆಂಥಾ ಸ್ಥಿತಿ ಬಂತು ನಮ್ಮೂರಿಗೆ ಎಂದು ಪುರಸಭೆಯ ಸದಸ್ಯೆ ರಂಗವ್ವ ಭಜಂತ್ರಿ ಮುಖ್ಯಾಧಿಕಾರಿ ಆರ್.ಹೊಸಮನಿಯವರನ್ನು ತರಾಟೆಗೆ ತೆಗೆದುಕೊಂಡರು.

ರೋಣ ಪುರಸಭೆಯ ಸಾಮಾನ್ಯ ಸಭೆಯಲ್ಲಿ ನೀರಿನ ಸಮಸ್ಯೆ ಕುರಿತು ಈ ವಿಷಯ ಪ್ರಸ್ತಾಪಿಸಿದ ರಂಗವ್ವ ಭಜಂತ್ರಿಯವರು, ನಮ್ಮ ವಾರ್ಡಿನಲ್ಲಿ ಕುಡಿಯಲು ಸಹ ನೀರು ಬಿಡುತ್ತಿಲ್ಲ. ಮುಖ್ಯವಾಗಿ ಕೊಡದಲ್ಲಿ ನೀರು ತುಂಬುವ ಬದಲು ಚರಗಿಯಲ್ಲಿ ನೀರು ತುಂಬುವ ಸ್ಥಿತಿ ಬಂದಿರುವುದು ನಮಗೆ ನಾಚಿಕೆ ತರಿಸಿದೆ. ಕೂಡಲೇ ಸಮಸ್ಯೆಯನ್ನು ಬಗೆಹರಿಸಿ ಎಂದು ತಾಕೀತು ಮಾಡಿದರು.


ಇದರಿಂದ ವಿಚಲಿತಗೊಂಡ ಮುಖ್ಯಾಧಿಕಾರಿಗಳು ತಕ್ಷಣ ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸುವುದಾಗಿ ತಿಳಿಸಿದರು. ಮಧ್ಯ ಪ್ರವೇಶಿಸಿದ 1ನೇ ವಾರ್ಡಿನ ಸದಸ್ಯ ಮಲ್ಲಯ್ಯ ಮಹಾಪುರುಷಮಠ, ನಮ್ಮ ವಾರ್ಡನ್ನು ಪುರಸಭೆಯು ಸಂಪೂರ್ಣ ನಿರ್ಲಕ್ಷ್ಯ ಮಾಡಿದ್ದು ಅಲ್ಲಿಯೂ ಕುಡಿಯುವ ನೀರಿನ ಸಮಸ್ಯೆ ವಿಪರೀತವಾಗಿದೆ. ಸಿಬ್ಬಂದಿಗಳನ್ನು ಕೇಳಿದರೆ ಸ್ಪಂದಿಸುತ್ತಿಲ್ಲ. ಶೌಚಾಲಯಗಳ ಸ್ಥಿತಿಯಂತೂ ಹೇಳತೀರದು. ಹಿಗಾದರೆ ನಾವು ಜನರಿಗೆ ಯಾವ ಉತ್ತರ ನೀಡಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸದಸ್ಯ ವಿಜಯ ಗಡಗಿ ಮಾತನಾಡಿ, ಪುರಸಭೆಯ ವ್ಯಾಪ್ತಿಯಲ್ಲಿ ಬರುವ ವಾಣಿಜ್ಯ ಮಳಿಗೆಗಳಲ್ಲಿ ವಹಿವಾಟು ನಡೆಸುವ ಮಾಲಿಕರು ಬಾಡಿಗೆ ಕಟ್ಟಿದ್ದಾರೆಯೇ ಎಂದು ಪ್ರಶ್ನಿಸಿದರು. ಇದರಿಂದ ಗಾಭರಿಗೊಂಡ ಸಿಬ್ಬಂದಿಗಳು ಮಾಹಿತಿ ನೀಡದಿದ್ದಾಗ, ಎಲ್ಲ ಸದಸ್ಯರು ವಿವರ ನೀಡಿ ಎಂದು ಒತ್ತಾಯಿಸಿದರು. ಲಕ್ಷಾಂತರ ರೂಗಳ ಬಾಡಿಗೆ ನೀಡದೆ ಹಾಗೆ ಬಿಟ್ಟಿರುವುದು ಕಂಡು ಬಂದಿತು. ಇದರಿಂದ ಆಕ್ರೋಶಗೊಂಡ ಸದಸ್ಯರು ಅವರಿಗೆ ನೋಟಿಸ್ ನೀಡಿ ಬಾಡಿಗೆಯನ್ನು ವಸೂಲಿ ಮಾಡಿ, ಇಲ್ಲ ಸೀಜ್ ಮಾಡಿ ಎಂದರು.

ಅಧ್ಯಕ್ಷೆ ಗೀತಾ ಮಾಡಲಗೇರಿ, ಉಪಾಧ್ಯಕ್ಷ ದುರ್ಗಪ್ಪ ಹಿರೇಮನಿ, ಸಂಗನಗೌಡ ಪಾಟೀಲ, ಗದಿಗೆಪ್ಪ ಕಿರೇಸೂರ, ಬಾವಾಸಾಬ ಬೆಟಗೇರಿ, ದಾವಲಸಾಬ ಬಾಡಿನ, ಸಂಗಪ್ಪ ಜಿಡ್ಡಿಬಾಗಿಲ ಸೇರಿದಂತೆ ಸದಸ್ಯರು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ನಿಧನ

### ಅಶೋಕ ಸಂಗಪ್ಪ ದೊಡ್ಡಣ್ಣವರ



ಗದಗ: ನಗರದ ವಕೀಲ ಚಾಳಾದ ಮಸಾರಿ, ನಿವಾಸಿ, ಕೆಎಸ್‌ಆರ್‌ಟಿಸಿ ನಿವೃತ್ತ ಚಾಲಕ ಅಶೋಕ ಸಂಗಪ್ಪ ದೊಡ್ಡಣ್ಣವರ ಸೆ.25ರಂದು ತಮ್ಮ 61ನೇ ವಯಸ್ಸಿನಲ್ಲಿ ನಿಧನರಾದರು. ಮೃತರು ಧರ್ಮಪತ್ನಿ, ಓರ್ವ ಪುತ್ರ, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

# ನಮ್ಮೂರ ದಸರಾ ಉತ್ಸವಕ್ಕೆ ಆಹ್ವಾನ



■ವಿಜಯಸಾಕ್ಷಿ ಸುದ್ದಿ, ಗದಗ

ಎಸ್‌ಎಸ್‌ಕೆ ಸಮಾಜದ ವತಿಯಿಂದ ನಗರದ ಹಳೇ ಸರಾಫ್ ಬಜಾರದಲ್ಲಿರುವ ಜಗದಂಬಾ ದೇವಸ್ಥಾನದ ಸಹಸ್ರಾರ್ಜುನ ಸಮುದಾಯ ಭವನದ ಭಾಸ್ಕರಸಾ ಪವಾರ ಸಭಾಗೃಹದಲ್ಲಿ ನಡೆಯಲಿರುವ ನಮ್ಮೂರ ದಸರಾ ಉತ್ಸವ-2024 ಕಾರ್ಯಕ್ರಮಕ್ಕೆ ಗದಗ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಹಾಗೂ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಅವರಿಗೆ ಆಮಂತ್ರಣ ನೀಡಲಾಯಿತು.

ನಾಡಹಬ್ಬ ನಮ್ಮೂರ ದಸರಾ ಉತ್ಸವದ ಅಂಗವಾಗಿ ಅಕ್ಟೋಬರ್ 10ರಂದು ಗುರುವಾರ ಬೆಳಿಗ್ಗೆ 7 ಗಂಟೆಗೆ ನಡೆಯಲಿರುವ ದಸರಾ ದರಬಾರ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಆಮಂತ್ರಣ ಪತ್ರಿಕೆ ನೀಡಿ ಆಹ್ವಾನಿಸಲಾಯಿತು. ಇದೇ ಸಂದರ್ಭದಲ್ಲಿ ಎಸ್‌ಎಸ್‌ಕೆ ಸಮಾಜದ ವತಿಯಿಂದ ಹಿಂದಿನಿಂದ ನಡೆದುಕೊಂಡು ಬಂದ ನಮ್ಮೂರ ದಸರಾ ದರಬಾರ ಕುರಿತು ಪಂಚ ಕಮಿಟಿ ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಗದಗ ಎಸ್‌ಎಸ್‌ಕೆ ಸಮಾಜದ ಪಂಚ ಕಮಿಟಿ ಅಧ್ಯಕ್ಷ ಫಕೀರಸಾ ಬಾಂಡಗೆ, ಸಮಿತಿ ಚೇರಮನ್ ವಿಷ್ಣುಸಾ ಶಿದ್ಲಿಂಗ, ವೈಸ್ ಚೇರಮನ್ ಸಾಗರ ಪವಾರ, ವಿಶ್ವನಾಥಸಾ ಸೋಳಂಕಿ, ಕಾರ್ಯದರ್ಶಿ ರಾಘವೇಂದ್ರ ಬಾಂಡಗೆ, ಖಜಾಂಚಿ ಸತೀಶ ದವಳೆ ಮುಂತಾದವರು ಉಪಸ್ಥಿತರಿದ್ದರು.

## ಶಕ್ತಿ ಯೋಜನೆಯ ಪ್ರಯಾಣ ಮಾಹಿತಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸರ್ಕಾರದ ಮಹಾತ್ವಾಂಕ್ಷಿ ಯೋಜನೆಯಾದ 'ಶಕ್ತಿ ಯೋಜನೆ'ಗೆ 11-06-2023ರಂದು ರಾಜ್ಯಾದ್ಯಂತ ಚಾಲನೆ ನೀಡಲಾಗಿದೆ. ಕರ್ನಾಟಕ ರಾಜ್ಯದಲ್ಲಿ ವಾಸಿಸುತ್ತಿರುವದಕ್ಕೆ ಪುರಾವೆಗಾಗಿ ಸರ್ಕಾರದಿಂದ ವಿತರಿಸಿದ ಅಧಿಕೃತ ಗುರುತಿನ ಚೀಟಿ ತೋರಿಸಿ ಮಹಿಳೆಯರು (ವಿದ್ಯಾರ್ಥಿನಿಯರು & ಲಿಂಗತ್ವ ಅಲ್ಪಸಂಖ್ಯಾತರೂ ಸೇರಿದಂತೆ) ಸಂಸ್ಥೆಯ ನಗರ/ಉಪನಗರ, ಸಾಮಾನ್ಯ, ವೇಗದೂತ ಸಾರಿಗೆಗಳಲ್ಲಿ ರಾಜ್ಯದ ಒಳಗೆ ಹಾಗೂ ಆಯ್ದ ಅಂತರರಾಜ್ಯ ವೇಗದೂತ/ಸಾಮಾನ್ಯ ಸಾರಿಗೆಗಳಲ್ಲಿ ರಾಜ್ಯದ ಗಡಿಯವರೆಗೆ ಶೂನ್ಯ ಮೊತ್ತದ ದಾರಿ ಚೀಟಿ (Ticket) ಪಡೆದು ಉಚಿತವಾಗಿ ಪ್ರಯಾಣಿಸಬಹುದಾಗಿದೆ.

ವಾ.ಕ.ರ.ಸಾ ಸಂಸ್ಥೆಯಲ್ಲಿ ಶಕ್ತಿ ಯೋಜನೆಯಡಿ ಮಾರ್ಚ್-2024ರ ಅಂತ್ಯದವರೆಗೆ ಒಟ್ಟು 42.14 ಕೋಟಿ ಮಹಿಳೆಯರು ಪ್ರಯಾಣಿಸಿದ್ದು, ಪ್ರಯಾಣದ ಒಟ್ಟು ಮೊತ್ತ ರೂ.1076.13 ಕೋಟಿ ಆಗಿರುತ್ತದೆ. 11-06-2023ರಿಂದ ಆಗಸ್ಟ್-2024ರ ಮಾಸಾಂತ್ಯದವರೆಗೆ ಒಟ್ಟು 64.66 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದು, ಉಚಿತ ಪ್ರಯಾಣದ ಒಟ್ಟು ಮೊತ್ತ ರೂ.1662.25 ಕೋಟಿ ಆಗಿರುತ್ತದೆ. ಮಾಸಿಕ ಸರಾಸರಿ 4.25 ಕೋಟಿ ಮಹಿಳೆಯರು ಹಾಗೂ ದಿನವಹಿ ಸರಾಸರಿ 14.43 ಲಕ್ಷ ಜನ ಮಹಿಳೆಯರು ಉಚಿತವಾಗಿ ಪ್ರಯಾಣಿಸಿರುತ್ತಾರೆ. ಮಾಸಿಕ ಸರಾಸರಿ ಉಚಿತ ಪ್ರಯಾಣದ ಮೊತ್ತ ರೂ.110.26 ಕೋಟಿ ಆಗಿರುತ್ತದೆ ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

## ಗ್ರಾಮಾಡಳಿತಾಧಿಕಾರಿಗಳ ಪ್ರತಿಭಟನೆ



■ವಿಜಯಸಾಕ್ಷಿ ಸುದ್ದಿ, ರೋಣ

ಮೂಲಭೂತ ಸೌಲಭ್ಯಗಳನ್ನು ಒದಗಿಸದೆ ಕೆಲಸ ನಿರ್ವಹಿಸಲು ಒತ್ತಡ ಹೇರಲಾಗುತ್ತಿದೆ. ಈಗಾಗಲೇ 22ಕ್ಕೂ ಹೆಚ್ಚು ಸರಕಾರಿ ಕೆಲಸಗಳನ್ನು ಮೊಬೈಲ್‌ನಲ್ಲಿ ನಿರ್ವಹಣೆ ಮಾಡುತ್ತಿದ್ದರೂ ಸಹ ಸಮಸ್ಯೆಗಳು ತಪ್ಪಿಲ್ಲ. ಸರಕಾರ ನಮಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು ಎಂದು ಆಗ್ರಹಿಸಿ ತಹಸೀಲ್ದಾರ್ ಕಚೇರಿಯ ಆವರಣದಲ್ಲಿ ಗುರುವಾರ ಗ್ರಾಮಾಡಳಿತಾಧಿಕಾರಿಗಳು ಕೈಗೆ ಕಪ್ಪು ಪಟ್ಟಿ ಧರಿಸಿ ಮೂಲಕ ಅನಿರ್ದಿಷ್ಟಾವಧಿ ಮುಷ್ಕರ ನಡೆಸಿದರು.

ತಾಲೂಕಾಧ್ಯಕ್ಷ ಎಸ್.ಎಸ್. ಗಿರಿಯಪ್ಪಗೌಡ ಮಾತನಾಡಿ, ಸರಕಾರ ವಹಿಸುವ ಜವಾಬ್ದಾರಿಗಳನ್ನು ಗ್ರಾಮಾಡಳಿತಾಧಿಕಾರಿಗಳು ಸಮರ್ಪಕವಾಗಿ ನಿಭಾಯಿಸುತ್ತಾ ಬಂದಿದ್ದಾರೆ. ಆದರೆ ಈಗ 21 ತಂತ್ರಾಂಶಗಳನ್ನು ನಿರ್ವಹಣೆ ಮಾಡಿದರೂ ಸಹ ನಮಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿಲ್ಲ. ಆದರೂ ಕೆಲಸ ನಿರ್ವಹಿಸಿ ಎಂದು ಒತ್ತಡ ಹಾಕುತ್ತಿರುವುದು ಸಮಂಜಸವಲ್ಲ. ಮೊಬೈಲ್ ತಂತ್ರಾಂಶದಲ್ಲಿ ಕೆಲಸ ನಿರ್ವಹಿಸುವ ಸಂದರ್ಭದಲ್ಲಿ ನೆಟ್‌ವರ್ಕ್ ಸಮಸ್ಯೆಗಳಿರುತ್ತವೆ. ಗ್ರಾಮೀಣ ಭಾಗಗಳಲ್ಲಿಯೂ ಹಲವು ಸಮಸ್ಯೆಗಳಿದ್ದು, ಅವುಗಳನ್ನು ಬಗೆಹರಿಸದೆ ನಮಗೆ ಒತ್ತಡ ಹಾಕಿದರೆ ಹೇಗೆ ಎಂದು ಪ್ರಶ್ನಿಸಿದರು.

ಜೆ.ಎಂ. ಹವಾಲ್ದಾರ ಮಾತನಾಡಿ, ಗ್ರಾಮಾಡಳಿತಾಧಿಕಾರಿಗಳಿಗೆ ಸ್ವಂತ ಕಚೇರಿಗಳಿಲ್ಲ. ಮುಖ್ಯವಾಗಿ ಕಿರುಕುಳ ಹೆಚ್ಚಾಗಿದೆ. ಇನ್ನು ಕೆಲಸ ನಿರ್ವಹಿಸುವ ಸಂಧರ್ಭದಲ್ಲಿ ಹಲ್ಲೆ ಮಾಡಿರುವ ಘಟನೆಗಳೂ ನಡೆದಿದ್ದು, ಸರಕಾರ ಇವುಗಳನ್ನು ಅವಲೋಕಿಸಿ ನಮಗೆ ಅಗತ್ಯ ಇರುವ ಸೌಲಭ್ಯಗಳನ್ನು ಒಸಗಿಸಬೇಕು ಎಂದು ಆಗ್ರಹಿಸಿದರು. ಕಂದಾಯ ಇಲಾಖೆಯಲ್ಲಿ ಕೆಲಸ ನಿರ್ವಹಿಸುವ ಇತರೆ ಸಿಬ್ಬಂದಿಗಳು ಗ್ರಾಮಾಡಳಿತಾಧಿಕಾರಿಗಳ ಮುಷ್ಕರಕ್ಕೆ ಬಾಹ್ಯ ಬೆಂಬಲವನ್ನು ವ್ಯಕ್ತಪಡಿಸಿದರು. ಸಂತೋಷ ಪೂಜಾರ, ಜೆ.ಎಚ್. ಜಂತ್ಲಿ, ವಾಯ್.ಡಿ. ಬಡಿಗೇರ, ಜಗದೀಶ ತೊಗರಿಕಟ್ಟಿ, ಎಲ್.ಎಂ. ಅರಹುಣಸಿ, ಕಿರ್ತಿ ಗಾಣಿಗೇರ, ದೀಪಾ ಹೆಬ್ಬಾಳ, ಪ್ರತಿಭಾ ಗೌಡರ ಸೇರಿದಂತೆ ಗ್ರಾಮಾಡಳಿತಾಧಿಕಾರಿಗಳು ಉಪಸ್ಥಿತರಿದ್ದರು.

### ಅಗತ್ಯ ಪರಿಕರ, ಸಿಬ್ಬಂದಿ ಕೊರತೆ | ನರೇಗಲ್ಲ ಸಮುದಾಯ ಆರೋಗ್ಯ ಕೇಂದ್ರಕ್ಕೇ ಅನಾರೋಗ್ಯ

# ಚಿಕಿತ್ಸೆಗೆಂದು ಒಳಕ್ಕೆ ಹೋದೀರಿ ಜೋಕೆ!

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನರೇಗಲ್ಲ ಗದಗ ಜಿಲ್ಲೆಯ ಅತಿ ದೊಡ್ಡ ಹೋಬಳಿ ಕೇಂದ್ರ. ಇಲ್ಲೊಂದು ಪ್ರಾಥಮಿಕ ಆರೋಗ್ಯ ಕೇಂದ್ರವಿದೆ. ಮೂರು ವರ್ಷಗಳ ಹಿಂದೆ ಈ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು 30 ಹಾಸಿಗೆಗಳ ಸಮುದಾಯ ಆರೋಗ್ಯ ಕೇಂದ್ರವೆಂದು ಮೇಲ್ದರ್ಜೆಗೇರಿಸಲಾಗಿದೆ. ಆದರೆ ಈ ಸಮುದಾಯ ಆರೋಗ್ಯ ಕೇಂದ್ರವೇ ಅನಾರೋಗ್ಯಕ್ಕೆ ಒಳಗಾಗಿದ್ದು, ಸುಂದರ ಕಟ್ಟಡವನ್ನು ನೋಡಿ ಯಾರಾದರೂ ಚಿಕಿತ್ಸೆಗೆಂದು ಒಳಕ್ಕೆ ಹೋದೀರಿ ಜೋಕೆ!

ಈ ಸಮುದಾಯ ಆರೋಗ್ಯ ಕೇಂದ್ರಕ್ಕೆಂದೆ ಹೊಸದಾದ ಕಟ್ಟಡವನ್ನು 2 ಕೋಟಿ ರೂ ವೆಚ್ಚದಲ್ಲಿ ನಿರ್ಮಿಸಲಾಗಿದೆ. ಆದರೆ ನೂತನ ಸಮುದಾಯ ಆರೋಗ್ಯ ಕೇಂದ್ರಕ್ಕೆ ಅಗತ್ಯ ಸಲಕರಣೆಗಳು, ಸಿಬ್ಬಂದಿಗಳು ಇಲ್ಲದಿರುವುದರಿಂದ ಕೋಟ್ಯಾಂತರ ರೂಪಾಯಿ ಖರ್ಚು ಮಾಡಿ ನಿರ್ಮಿಸಿರುವ ಆಸ್ಪತ್ರೆ ಸಾರ್ವಜನಿಕರಿಗೆ ಯಾವುದಕ್ಕೂ ಉಪಯೋಗವಿಲ್ಲದಂತಾಗಿದೆ.

ಈ ಕೇಂದ್ರವು 30 ಹಾಸಿಗೆಗಳ ಕೇಂದ್ರವಾಗಿದ್ದು, ಇದರಲ್ಲಿ ಪ್ರಯೋಗಾಲಯ, ಕ್ಷ-ಕಿರಣ ವಿಭಾಗ, ಔಷಧ ಸಂಗ್ರಹಣಾ/ವಿತರಣಾ ವಿಭಾಗ, ಶಸ್ತ್ರ ಚಿಕಿತ್ಸಾ ವಿಭಾಗ, ಪ್ರಸೂತಿ ವಿಭಾಗ ಹೀಗೆ ಅನೇಕ ವಿಭಾಗಗಳನ್ನು ಒಳಗೊಂಡಿದೆ. ಆದರೆ ಯಾವುದೇ ವಿಭಾಗಕ್ಕೆ ಬೇಕಾದ ಸಲಕರಣೆಗಳನ್ನು ಇನ್ನೂ ಪೂರೈಕೆ ಮಾಡಲಾಗಿಲ್ಲ. ಕುರ್ಚಿ, ಕಾಟ್, ಬೆಡ್, ಟೇಬಲ್ ಸೇರಿದಂತೆ ಇತರೆ ಯಾವುದೇ ಸೌಲಭ್ಯಗಳು ಇಲ್ಲಿ ಇಲ್ಲದಿರುವುದರಿಂದ ಆಸ್ಪತ್ರೆ ಇದ್ದೂ ಇಲ್ಲದಂತಾಗಿದೆ.




ಪಟ್ಟಣ ಸೇರಿದಂತೆ ಜಕ್ಕಲಿ, ಹಾಲಕೆರೆ, ಬೂದಿಹಾಳ, ಮಾರನಬಸರಿ, ಕೋಡಿಕೊಪ್ಪ, ಕೋಚಲಾಪೂರ, ತೋಟಗಂಟಿ, ದ್ಯಾಂಪೂರ, ಮಲ್ಲಾಪೂರ ಗ್ರಾಮಗಳ ಸುಮಾರು 30 ಸಾವಿರ ಜನರ ಹಾಗೂ ಪಕ್ಕದ ಗದಗ ತಾಲೂಕಿನ ಕೋಟುಮಚಗಿ, ಯಲಬುರ್ಗಾ ತಾಲೂಕಿನ ಬಂಡಿಹಾಳ, ತೊಂಡಿಹಾಳ ಗ್ರಾಮಗಳ 100ರಿಂದ 200 ರೋಗಿಗಳು ನಿತ್ಯವೂ ಚಿಕಿತ್ಸೆಗಾಗಿ ಬರುತ್ತಾರೆ.

ಖಾಲಿ ಹುದ್ದೆಗಳು: ನೂತನ ಸಮುದಾಯ ಆರೋಗ್ಯ ಕೇಂದ್ರದಲ್ಲಿರುವ ಖಾಲಿ ಹುದ್ದೆಗಳ ಒಟ್ಟು ಸಂಖ್ಯೆ 31. ಇದರಲ್ಲಿ ಎಸ್‌ಎಂಒ(ಸಿನಿಯರ್ ಮೆಡಿಕಲ್ ಆಫೀಸರ್), ತಜ್ಞ ವೈದ್ಯರು 5, ಶುಶ್ರೂಷಕಿಯರು 6, ಆಂಬುಲೆನ್ಸ್ ವಾಹನ ಚಾಲಕರು ಇಬ್ಬರು, ಗ್ರುಪ್ ಡಿ 10, ನೇತ್ರಾಧಿಕಾರಿ, ಕ್ಷಕಿರಣ ತಂತ್ರಜ್ಞ, ಕ್ಷಕಿರಣ ಸಹಾಯಕ, ಪ್ರಯೋಗಾಲಯ ಸಹಾಯಕ, ಕಚೇರಿ ಅಧೀಕ್ಷಕರು, ಸೀನಿಯರ್ ಪುರುಷ ಹೆಲ್ತ್ ಎಜ್ಯುಕೇಟರ್, ಹುದ್ದೆಗಳು ಖಾಲಿ ಇವೆ. ಈಗ ಇಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ಸಂಖ್ಯೆ ಕೇವಲ 8. ಇಷ್ಟು ಜನ ಸಿಬ್ಬಂದಿಗೆ ನಿತ್ಯವೂ ಬರುವ ನೂರಾರು ರೋಗಿಗಳನ್ನು ನಿಯಂತ್ರಣ ಮಾಡಿ, ಸೂಕ್ತ ಚಿಕಿತ್ಸೆ ನೀಡುವುದೇ ಒಂದು ಸವಾಲಾಗಿದೆ.

> ಆಸ್ಪತ್ರೆಗೆ ಭೌತಿಕ ಸೌಲಭ್ಯಗಳನ್ನು ಮಾತ್ರ ಕಲ್ಪಿಸಿದರೆ ಸಾಲದು. ಎಲ್ಲ ಸಿದ್ಧತೆಯನ್ನೂ ಮಾಡಿಕೊಂಡು ಆಸ್ಪತ್ರೆಯ ಉದ್ಘಾಟನೆ ಮಾಡಿದ್ದರೆ ಸೂಕ್ತವೆನ್ನಿಸುತ್ತಿತ್ತು. ಉದ್ಘಾಟನೆಯಾದರೂ ಚಿಕಿತ್ಸೆಯ ಭಾಗ್ಯವಿಲ್ಲದ ಈ ಆಸ್ಪತ್ರೆಯನ್ನು ತೆಗೆದುಕೊಂಡು ಸಾರ್ವಜನಿಕರು ನಾವೇನು ಮಾಡುವುದು?
>
> – **ಶಿವಪುತ್ರಪ್ಪ ಸಂಗನಾಳ.** ನಿವೃತ್ತ ಸೈನಿಕರು.

> ನರೇಗಲ್ಲ ಸಮುದಾಯ ಆರೋಗ್ಯ ಕೇಂದ್ರಕ್ಕೆ ಬೇಕಾಗುವ ಸಿಬ್ಬಂದಿ ನೇಮಕಾತಿಗೆ ಮಂಜೂರಿ ನೀಡಲು ಈಗಾಗಲೆ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಆಸ್ಪತ್ರೆಗೆ ಬೇಕಾಗುವ ಕಾಟ್, ಮತ್ತಿತರ ಸಲಕರಣೆಗಳ ಖರೀದಿಗೆ ಈಗಾಗಲೇ ಟೆಂಡರ್ ಕರೆಯಲಾಗಿದ್ದು, ಕೇಂದ್ರದ ಸುತ್ತಲೂ ರಕ್ಷಣಾ ಗೋಡೆ ಕಟ್ಟಲು ಅಂದಾಜು 1 ಕೋಟಿ ರೂಪಾಯಿಗಳ ಕ್ರಿಯಾ ಯೋಜನೆಯನ್ನು ಜಿಲ್ಲಾ ಪಂಚಾಯತ್‌ಗೆ ಸಲ್ಲಿಸಲಾಗಿದೆ. ಇನ್ನು ಕೆಲವೇ ತಿಂಗಳುಗಳಲ್ಲಿ ಈ ಎಲ್ಲ ಕಾರ್ಯಗಳು ಮಂಜೂರಿಯಾಗಿ ಸಮುದಾಯ ಕೇಂದ್ರವು ಸಾರ್ವಜನಿಕರ ಸೇವೆಗೆ ಅಣಿಗೊಳ್ಳಲಿದೆ.
>
> – **ಡಾ.ಶಿವಪ್ರಕಾಶ ನೀಲಗುಂದ. ಜಿಲ್ಲಾ ವೈದ್ಯಾಧಿಕಾರಿ.**

### ಪಂ. ದೀನ ದಯಾಳ ಉಪಾಧ್ಯಾಯರ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ನಾಗರಾಜ ಕುಲಕರ್ಣಿ

# ಮಹನೀಯರ ಆಚಾರ-ವಿಚಾರಗಳನ್ನು ಅನುಸರಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಾವಿರಾರು ಜಾತಿ, ಮತ, ಪಚಿಥ, ಧರ್ಮಗಳ, ವಿವಿಧ ಸಂಸ್ಕೃತಿ ಪರಂಪರೆ ಹೊಂದಿದ ಜನ ಸಮುದಾಯಗಳನ್ನು ಒಂದೇ ಕುಟುಂಬದವರಂತೆ ಜೀವಿಸಬೇಕೆಂಬ ರಾಷ್ಟ್ರೀಯತೆಯನ್ನು ದೇಶದಲ್ಲಿ ಪುನರುಜ್ಜೀವನಗೊಳಿಸುವಲ್ಲಿ ಪಂಡಿತ ದೀನ ದಯಾಳ ಉಪಾಧ್ಯಾಯ ಅವರ ಕೊಡುಗೆ ಅಪಾರ ಎಂದು ಬಿಜೆಪಿ ಹಿರಿಯ ಮುಖಂಡ ನಾಗರಾಜ ಕುಲಕರ್ಣಿ ಹೇಳಿದರು.

ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ನಡೆದ ಜನಸಂಘದ ಸಂಸ್ಥಾಪಕರಲ್ಲಿ ಒಬ್ಬರಾದ ಪಂಡಿತ್ ದೀನ ದಯಾಳ ಉಪಾಧ್ಯಾಯರ 108ನೇ ಜನ್ಮ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತಾನಾಡುತ್ತಿದ್ದರು.

ಕಾಂಗ್ರೆಸ್‌ನ ನಿರಂಕುಶ ಪ್ರಭುತ್ವದಿಂದ ದೇಶದ ಏಕತೆ, ಸಮಗ್ರತೆ ಮತ್ತು ಅಭಿವೃದ್ಧಿ ಸಾಧ್ಯವಿಲ್ಲ ಎಂಬ ಕಾರಣಕ್ಕಾಗಿ ಜನಸಂಘ, ಜನತಾ ಪಕ್ಷ, ಬಿಜೆಪಿ ಹುಟ್ಟಿಕೊಂಡಿತು. ವ್ಯಕ್ತಿಗಿಂತ ಪಕ್ಷ, ಪಕ್ಷಕ್ಕಿಂತ ದೇಶ ಮೊದಲು ಎಂಬ ಧ್ಯೇಯದೊಂದಿಗೆ ಪ್ರತಿ ಜನಸಾಮಾನ್ಯರಿಗೂ ಒಳಿತಾಗಬೇಕು ಎಂದು ಹಗಲಿರುಳು ದುಡಿದ ಪಂಡಿತ್ ಅವರ ಆಚಾರ-ವಿಚಾರಗಳನ್ನು ನಾವೆಲ್ಲ ಅನುಸರಿಸಬೇಕು ಎಂದು ಅಭಿಪ್ರಾಯಪಟ್ಟರು.



ಮುಖ್ಯ ಅತಿಥಿಗಳಾದ ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ನಿಗಮ ಮಂಡಳಿ ಮಾಜಿ ಅಧ್ಯಕ್ಷ ಎಮ್.ಎಸ್. ಕರಿಗೌಡ್ರ, ಗದಗ ನಗರ ಮಂಡಲ ಅಧ್ಯಕ್ಷ ಅನಿಲ ಅಬ್ಬಿಗೇರಿ ಮಾತನಾಡಿದರು. ವೇದಿಕೆಯಲ್ಲಿ ಪಕ್ಕೀರೇಶ್ ರಟ್ಟೀಹಳ್ಳಿ, ಬುದ್ಧಪ್ಪ ಹಳ್ಳಿ, ಉಷಾ ದಾಸರ ಉಪಸ್ಥಿತರಿದ್ದರು.

ಮುಖಂಡರಾದ ಅಶೋಕ ನವಲಗುಂದ, ವಿಜಯಕುಮಾರ ಗಡ್ಡಿ, ಭೀಮಸಿಂಗ ರಾಠೋಡ, ಸಿದ್ದಣ್ಣ ಪಲ್ಲೇದ, ಸುನೀಲ ಮಹಾಂತಾಶೆಟ್ಟರ, ಬಸವಣ್ಣೆಪ್ಪ ಚಿಂಚಲಿ, ವಿನಾಯಕ ಮಾನ್ವಿ, ಜಾನು ಲಮಾಣಿ, ಪ್ರಕಾಶ ಅಂಗಡಿ, ಪ್ರಶಾಂತ ನಾಯ್ಕರ, ಸುರೇಶ ಮರಳಪ್ಪನವರ, ಚಂದ್ರು ತಡಸದ, ಪಕ್ಕೀರೇಶ್ ರಟ್ಟೀಹಳ್ಳಿ, ಮುತ್ತು ಮುಶಿಗೇರಿ, ಲಕ್ಷ್ಮೀ ಕಾಕಿ, ವಿದ್ಯಾವತಿ ಗಡಗಿ, ವಿಜಯಲಕ್ಷ್ಮೀ ದಿಂಡೂರ, ಶಾರದಾ ಸಜ್ಜನರ, ಜಯಶ್ರೀ ಉಗಲಾಟ, ಸಂತೋಷ ಅಕ್ಕಿ, ನವೀನ ಕೊಟೆಕಲ್, ರಾಜೇಶ ಮುಟಗಾರ, ಸುರೇಶ ಚವ್ಹಾಣ, ಸ್ವಾತಿ ಅಕ್ಕಿ, ಕಾರ್ತಿಕ ಶಿಗ್ಲಿಮಠ, ವಿನೋದ ಹಂಸನೂರ ಮುಂತಾದವರು ಪಾಲ್ಗೊಂಡಿದ್ದರು.

> ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಾತನಾಡಿ, ಅಂದಿನ ಜನಸಂಘದಿಂದ ಇಂದಿನ ಬಿಜೆಪಿಯವರೆಗೆ ಸಂಘಟನೆ ವೈಚಾರಿಕತೆ ಮತ್ತು ವಿಚಾರಗಳಿಂದ ವಿಮುಖರಾಗದೆ ಜೀವ ಹಾಗೂ ಜೀವನವನ್ನೇ ಮುಡಿಪಾಗಿಟ್ಟ ಅನೇಕ ಮಹನೀಯರ ತ್ಯಾಗದಿಂದ ಬಿಜೆಪಿ ಸಂಖ್ಯಾತ್ಮಕವಾಗಿ ಮತ್ತು ಗುಣಾತ್ಮಕವಾಗಿ ಬೆಳೆಯುವಲ್ಲಿ ಯಶಸ್ವಿಯಾಗಿದ್ದು, ರಾಷ್ಟ್ರಹಿತದ ಧ್ಯೇಯವೇ ಬಿಜೆಪಿಯ ಉಸಿರಾಗಿದೆ ಎಂದು ಹೇಳಿದರು.

### ಗ್ರಾಮ ಆಡಳಿತ ನೌಕರರ ಸಂಘದಿಂದ ಪ್ರತಿಭಟನೆ

# ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಗ್ರಾಮ ಆಡಳಿತ ನೌಕರರ ವಿವಿಧ ಬೇಡಿಕೆಗಳ ಈಡೇರಿಕೆ ಹಾಗೂ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಬೇಕು ಎಂದು ಒತ್ತಾಯಿಸಿ ಗ್ರಾಮ ಆಡಳಿತ ನೌಕರರ ಸಂಘದ ನೌಕರರು ನಗರದ ತಹಶೀಲ್ದಾರ್ ಕಚೇರಿಯ ಆವರಣದಲ್ಲಿ ಗುರುವಾರ ಪ್ರತಿಭಟನೆ ನಡೆಸಿದರು.

ಕಂದಾಯ ಇಲಾಖೆಯ ವತಿಯಿಂದ ನೀಡಲಾಗುವ ಸೌಲಭ್ಯಗಳನ್ನು 21 ತಂತ್ರಾಂಶಗಳನ್ನು ದಾಖಲು ಮಾಡಲು ಯಾವುದೇ ಸೌಲಭ್ಯ ನೀಡುತ್ತಿಲ್ಲ. ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು. ಸೇವಾ ವಿಷಯಗಳಿಗೆ ಸಂಬಂಧಿಸಿದಂತೆ ಸೌಲಭ್ಯಗಳನ್ನು ಕಲ್ಪಿಸಿಕೊಡಬೇಕು. ಪ್ರೋಟೋಕಾಲ್ ಕೆಲಸದಿಂದ ಗ್ರಾಮ ಆಡಳಿತ ಅಧಿಕಾರಿಗಳನ್ನು ಕೈಬಿಡಬೇಕು. ಮುಟ್ಯೇಷನ ಅವಧಿಯನ್ನು ವಿಸ್ತರಣೆ ಮಾಡಬೇಕು. ಗ್ರಾಮ ಸಹಾಯಕರಿಗೆ ಸೇವಾ ಭದ್ರತೆಯನ್ನು ಒದಗಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.



ಗ್ರಾಮ ಆಡಳಿತ ಸಂಘದ ಜಿಲ್ಲಾಧ್ಯಕ್ಷ ಮಹ್ಮದ ಆಸೀಫ್ ಅಲಿ, ಉಪಾಧ್ಯಕ್ಷ ಬಸವರಾಜ ಲಂಬಾಣಿ, ತಾಲ್ಲೂಕಾಧ್ಯಕ್ಷ ಗಂಗಾಧರ ಹಳ್ಳಿ, ಕಂದಾಯ ಇಲಾಖೆಯ ನೌಕರರ ಸಂಘ ಜಿಲ್ಲಾಧ್ಯಕ್ಷ ಮಂಜುನಾಥ ಮ್ಯಾಗಳಮನಿ, ವಿಕಲಚೇತನ ನೌಕರರ ಸಂಘದ ರಾಜ್ಯಾಧ್ಯಕ್ಷ ಬೀರಪ್ಪ ಅಂಡಗಿ, ಗವಿಸಿದ್ದಪ್ಪ ಮಣ್ಣೂರು ಇದ್ದರು.




ಮುಳಗುಂದ ಪಟ್ಟಣದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ (ಡಿಪಿಇಪಿ) ಶಾಲೆಯ ವಿದ್ಯಾರ್ಥಿನಿ ಅಂಜುಮಾ ಸಂದಿಗವಾಡ ಜಿಲ್ಲಾ ಮಟ್ಟದ ದಸರಾ ಕ್ರೀಡಾ ಕೂಟದ 400ಮೀ ಓಟದಲ್ಲಿ ದ್ವಿತೀಯ ಸ್ಥಾನ ಪಡೆಯುವ ಮೂಲಕ ಬೆಳಗಾವಿ ವಿಭಾಗ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದು, ಶಾಲಾ ಶಿಕ್ಷಕ ವೃಂದ ಹಾಗೂ ಎಸ್‌ಡಿಎಂಸಿ ಸರ್ವ ಸದಸ್ಯರು ಅಭಿನಂದಿಸಿದರು.

## ಗ್ರಾಮ ಆಡಳಿತ ಅಧಿಕಾರಿಗಳ ಮುಷ್ಕರಕ್ಕೆ ಡಿಎಸ್‌ಎಸ್ ಬೆಂಬಲ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಕೇಂದ್ರ ಸಂಘದಿಂದ ಗದಗ ತಹಸೀಲ್ದಾರರ ಕಚೇರಿಯೆದುರು ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಅನಿರ್ದಿಷ್ಟ ಮುಷ್ಕರ ನಡೆಸುತ್ತಿರುವ ಸ್ಥಳಕ್ಕೆ ಕರ್ನಾಟಕ ದಲಿತ ಸಂಘರ್ಷ ಸಮಿತಿ ಅಂಬೇಡ್ಕರ್‌ವಾದ ಜಿಲ್ಲಾ ಸಮಿತಿಯಿಂದ ಬೆಂಬಲ ವ್ಯಕ್ತಪಡಿಸಿದರು.

ಗದಗ ಜಿಲ್ಲಾ ಪ್ರಧಾನ ಸಂಚಾಲಕ ಬಾಲರಾಜ್ ಅರಬರ ಮಾತನಾಡಿ, ಗ್ರಾಮ ಆಡಳಿತ ಅಧಿಕಾರಗಳ ಬೇಡಿಕೆಗಳು ನ್ಯಾಯತವಾಗಿವೆ. ಗ್ರಾಮ ಆಡಳಿತ ಅಧಿಕಾರಿಗಳಿಗೆ ಸುಸಜ್ಜಿತವಾದ ಕಚೇರಿ, ಉತ್ತಮ ಗುಣಮಟ್ಟದ ಕಚೇರಿ ಪರಿಕರಗಳು, ಅತ್ಯುತ್ತಮ ಗುಣಮಟ್ಟದ ಮೊಬೈಲ್ ಫೋನ್, ಲ್ಯಾಪ್ಟಾಪ್, ಪ್ರಿಂಟರ್ ಇತ್ಯಾದಿಗಳನ್ನು ಒದಗಿಸಬೇಕು. ಮೊಬೈಲ್ ತಂತ್ರಾಂಶಗಳ ಕೆಲಸದ ವಿಚಾರವಾಗಿ ಇದುವರೆಗೂ ಆಗಿರುವ ಎಲ್ಲಾ ಅಮಾನತ್ತುಗಳನ್ನು ತಕ್ಷಣವೇ ರದ್ದುಪಡಿಸಿ ಹಿಂಪಡೆಯುವ ಬಗ್ಗೆ ಸರ್ಕಾರ ಕೂಡಲೇ ಗಂಭೀರವಾಗಿ ಪರಿಗಣಿಸಿ ಮುಷ್ಕರ ನಡೆಸುತ್ತಿರುವ ಗ್ರಾಮ ಆಡಳಿತ ಅಧಿಕಾರಿಗಳ ಬೇಡಿಕೆಗಳನ್ನು ಈಡೇರಿಸಬೇಕೆಂದು ಸರ್ಕಾರಕ್ಕೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ದಲಿತ ಸಂಘರ್ಷ ಸಮಿತಿಗಳ ಒಕ್ಕೂಟ ಅಧ್ಯಕ್ಷ ನಾಗರಾಜ್ ಗೋಕಾವಿ, ರಮೇಶ್ ಚಲವಾದಿ, ಮುತ್ತಪ್ಪ ಭಜಂತ್ರಿ, ಕೆಂಚಪ್ಪ ಮ್ಯಾಗೇರಿ, ಸಂತೋಷ್ ಬಣಕಾರ ಮುಂತಾದವರು ಉಪಸ್ಥಿತರಿದ್ದರು.

### ಪದವಿ ಪೂರ್ವ ಕಾಲೇಜು ಕ್ರೀಡಾಕೂಟಕ್ಕೆ ಶಾಸಕ ರಾಘವೇಂದ್ರ ಹಿಟ್ನಾಳ ಚಾಲನೆ

# ಸದೃಢ ಆರೋಗ್ಯ ಮಾನಸಿಕ ನೆಮ್ಮದಿಗೆ ಕ್ರೀಡೆ ಅವಶ್ಯ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕ್ರೀಡೆಗಳು ಸದೃಢ ಆರೋಗ್ಯಕ್ಕೆ ಅತ್ಯವಶ್ಯವಾಗಿ ಬೇಕಾಗುತ್ತವೆ. ಸದಾ ಕ್ರೀಡೆ, ವ್ಯಾಯಾಮ ಚಟುವಟಿಕೆಗಳಿಂದ ಕೂಡಿರುವ ವಿದ್ಯಾರ್ಥಿಗಳು ಸದೃಢ ಆರೋಗ್ಯ ಮತ್ತು ಮಾನಸಿಕ ನೆಮ್ಮದಿ ಕಾಪಾಡಿಕೊಳ್ಳಲು ಕ್ರೀಡೆ ಅವಶ್ಯ ಎಂದು ಶಾಸಕ ರಾಘವೇಂದ್ರ ಹಿಟ್ನಾಳ ಕರೆ ನೀಡಿದರು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಗವಿಸಿದ್ಧೇಶ್ವರ ಪದವಿ ಪೂರ್ವ ಕಾಲೇಜು ಹಾಗೂ ಮರಿಶಾಂತವೀರ ಪದವಿ ಪೂರ್ವ ಕಾಲೇಜು ಸಂಯುಕ್ತಾಶ್ರಯದಲ್ಲಿ ನಡೆದ ಜಿಲ್ಲಾ ಮಟ್ಟದ ಪದವಿ ಪೂರ್ವ ಕಾಲೇಜುಗಳ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿ, ನಮ್ಮ ಭಾಗದಲ್ಲಿ ಇರುವ ವಿದ್ಯಾರ್ಥಿಗಳು ಅಂತರರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸುವ ಪ್ರತಿಭೆಗಳಿದ್ದಾರೆ, ಸದಾ ಪ್ರಯತ್ನ ಶೀಲರಾದರೆ ಅದು ಸಾಧ್ಯವಾಗಬಹುದೆಂದು ಅಭಿಪ್ರಾಯಪಟ್ಟರು.



ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ ಮಾತನಾಡಿ, ಇತ್ತೀಚಿನ ದಿನವಾನಗಳಲ್ಲಿ ವಿದ್ಯಾರ್ಥಿನಿಯರು ಕ್ರೀಡೆಗಳಲ್ಲಿ ಹೆಚ್ಚು-ಹೆಚ್ಚು ಭಾಗವಹಿಸುವಿಕೆ ಕಂಡುಬರುತ್ತಿರುವುದು ಸಂತಸದ ಸಂಗತಿ. ಓಲಂಪಿಕ್ಸ್ ಸ್ಪರ್ಧೆಯಲ್ಲಿ ಮಹಿಳೆಯರು ಶೂಟಿಂಗ್ ಏರ್ ಪಿಸ್ತೂಲ್ ವಿಭಾಗದಲ್ಲಿ ಭಾರತಕ್ಕೆ ಕಂಚು ಗೆದ್ದುಕೊಟ್ಟಿದ್ದು ಹೆಮ್ಮೆಯ ವಿಷಯವಾಗಿದೆ ಎಂದರು.

ಹಿರಿಯ ಪ್ರಾಚಾರ್ಯ ರಾಜಶೇಖರ ಪಾಟೀಲ್ ಮಾತನಾಡಿ, ಜಿಲ್ಲಾಮಟ್ಟದ ಕ್ರೀಡಾ ಕೂಟದಲ್ಲಿ ಎಲ್ಲಾ ವಿದ್ಯಾರ್ಥಿಗಳು ಕ್ರೀಡಾ ಸ್ಫೂರ್ತಿಯಿಂದ ಭಾಗವಹಿಸಿ ಕ್ರೀಡಾಕೂಟ ಯಶಸ್ವಿಗೊಳಿಸಬೇಕೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸಕ ಡಾ.ಸಿದ್ಧಲಿಂಗಪ್ಪ ಕೊಟ್ನೆಕಲ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಾಚಾರ್ಯರ ಸಂಘದ ಅಧ್ಯಕ್ಷ ಅನೀಲಕುಮಾರ ಜಿ, ಜಿಲ್ಲಾ ಉಪನ್ಯಾಸಕರ ಸಂಘದ ಅಧ್ಯಕ್ಷ ಸೋಮಶೇಖರಗೌಡ, ಕಾರ್ಯಧ್ಯಕ್ಷರ ಮಾರುತಿ ಲಕಮಾಪುರ, ಖಜಾಂಚಿ ಸಂಜಯ ಬಡಿಗೇರ, ಪ್ರಾಚಾರ್ಯ ಟಿ.ಸಿ ಶಾಂತಪ್ಪ, ಜಿಲ್ಲಾ ದೈಹಿಕ ಶಿಕ್ಷಣ ಪರಿವೀಕ್ಷಕ ಬಸವರಾಜ ಎ, ಸೇರಿದಂತೆ ಇತರರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka